ವಿಜಯಪುರ | ಸಂಪುಟ 04 | ಸಂಚಿಕೆ 189 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶನಿವಾರ, ಸೆಪ್ಟೆಂಬರ್, 19, 2026



"ಹಿಂದೂಗಳ ಹಕ್ಕುಗಳ ಮೇಲೆ ನಿರ್ಬಂಧ, ಪ್ರಶ್ನಿಸುವ ಮಾಧ್ಯಮದ ಮೇಲೆ ಪ್ರಕರಣ, ಇದೇನಾ ಕಾಂಗ್ರೆಸ್ ಸರ್ಕಾರದ 'ಜಾತ್ಯತೀತ' ಆಡಳಿತ, ನಾಗೇಂದ್ರ ರಾಜೀನಾಮೆಗೆ ಒತ್ತಾಯಿಸಿದಾಗ, ನನ್ನ ವಿರುದ್ಧ ಜಾತಿಯ ವಿಚಾರ ಮುಂದಿಟ್ಟಿದ್ದ ಈ ಸರ್ಕಾರ ಇಂದು ಒಬ್ಬ ದಲಿತ ಪತ್ರಕರ್ತನ ವಿರುದ್ಧ ಪ್ರಕರಣ ದಾಖಲಿಸಿರುವುದು ಎಷ್ಟು ಸರಿ?"

■ ಆರ್.ಅಶೋಕ
ವಿಧಾನಸಭೆ ವಿಪಕ್ಷ ನಾಯಕರು

# ಇಂದು ದೇವರಹಿಪ್ಪರಗಿ & ಸಿಂದಗಿಯಲ್ಲಿ ಪ್ರಜಾಸೇವಾ ಆಂದೋಲನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ, ಮನೆಬಾಗಿಲಿನಲ್ಲಿಯೇ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಉದ್ದೇಶದಿಂದ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ, ದೇವರಹಿಪ್ಪರಗಿ ಹಾಗೂ ಸಿಂದಗಿ ಮತಕ್ಷೇತ್ರದ ಶಾಸಕರ ನೇತೃತ್ವದಲ್ಲಿ ಸೆ.19ರಂದು ದೇವರಹಿಪ್ಪರಗಿ ಮತ್ತು ಸಿಂದಗಿಯಲ್ಲಿ ತಾಲೂಕು ಮಟ್ಟದ ಪ್ರಜಾಸೇವಾ ಆಂದೋಲನ ಸಭೆ ನಡೆಯಲಿದೆ.

ದೇವರಹಿಪ್ಪರಗಿಯಲ್ಲಿ ಬೆಳಿಗ್ಗೆ 10 ಗಂಟೆಗೆ ತಹಶೀಲ್ದಾರ್ ಕಚೇರಿಯ ಪ್ರಜಾಸೌಧದಲ್ಲಿ ಹಾಗೂ ಸಿಂದಗಿಯಲ್ಲಿ ಮಧ್ಯಾಹ್ನ 2 ಗಂಟೆಗೆ ಮಾಂಗಲ್ಯ ಭವನದಲ್ಲಿ ಸಭೆ ಆಯೋಜಿಸಲಾಗಿದೆ. ಸಾರ್ವಜನಿಕರು ಅಗತ್ಯ ದಾಖಲೆಗಳೊಂದಿಗೆ ಸಭೆಯಲ್ಲಿ ಭಾಗವಹಿಸಿ ತಮ್ಮ ಅಹವಾಲು ಸೇ-ರಿದಂತೆ ಸರ್ಕಾರದ ವಿವಿಧ ಯೋಜನೆಗಳ ಸವಲತ್ತು ಪಡೆಯಲು ಅರ್ಜಿ ಸಲ್ಲಿಸುವ ಮೂಲಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಅಧ್ಯಕ್ಷತೆಯಲ್ಲಿ ಸಭೆ



## ಅನುದಾನ ರಹಿತ ಪಪೂ ಕಾಲೇಜುಗಳ ಬೇಡಿಕೆ ಈಡೇರಿಕೆಗೆ ಆಗ್ರಹ

# ಕರ್ನಾಟಕ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ಆಡಳಿತ ಮಂಡಳಿಗಳ ಸಂಘದಿಂದ ಜಿಲ್ಲಾಧಿಕಾರಿಗಳಿಗೆ ಮನವಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ಆಡಳಿತ ಮಂಡಳಿಗಳ ಸಂಘ (ಏಗಕಒಂ), ವಿಜಯಪುರ ವತಿಯಿಂದ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ವಿಜಯಪುರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಅನುದಾನ ರಹಿತ ಪಿಯು ಕಾಲೇಜುಗಳ ಆಡಳಿತ ಮಂಡಳಿಗಳು ಹಲವು ವರ್ಷಗಳಿಂದ ಎದು-ರಿಸುತ್ತಿರುವ ಸಮಸ್ಯೆಗಳಿಗೆ ಸರ್ಕಾರ ಸೂಕ್ತ ಪರಿಹಾರ ಕಲ್ಪಿಸಬೇಕು. ಕಾಲೇಜುಗಳ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಕಾರ್ಯಗಳಿಗೆ ಅನುಕೂಲವಾಗುವಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಂಘ ಒತ್ತಾಯಿಸಿದೆ.

ಮನವಿಯಲ್ಲಿ ಪ್ರಮುಖವಾಗಿ ಓಈಖಿಫ, ಖಫಈ, ಖಿಃಈ ಸೇರಿದಂತೆ ವಿವಿಧ ಶುಲ್ಕಗಳ ಪಾವತಿ, ಪಿಯು ಕಾಲೇಜುಗಳ ನಿರ್ವಹಣೆಗೆ ಸಂಬಂಧಿಸಿದ ಸಮಸ್ಯೆಗಳು, ಸರ್ಕಾರಿ ಸೌಲಭ್ಯಗಳ ಲಭ್ಯತೆ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತಾಸಕ್ತಿಗೆ ಸಂಬಂಧಿಸಿದ ಹಲವು ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಏಗಕ-ಒಂ ವಿಜಯಪುರ ಅಧ್ಯಕ್ಷ ಲಿಂಗನಗೌಡ ಪಾಟೀಲ, "ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳು ಸರ್ಕಾರದ ಯಾವುದೇ ಅನುದಾನವಿಲ್ಲದೆ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ. ಆದರೆ ಕಾಲೇಜುಗಳು ಹಲವು ವರ್ಷಗಳಿಂದ ವಿವಿಧ ಆಡಳಿತಾತ್ಮಕ ಹಾಗೂ ಆರ್ಥಿಕ ಸಮಸ್ಯೆಗಳನ್ನು ಎದುರಿಸುತ್ತಿವೆ. ಸರ್ಕಾರ ನಮ್ಮ ಎಲ್ಲ ನ್ಯಾಯಯುತ ಬೇಡಿಕೆಗಳನ್ನು ಪರಿಗಣಿಸಿ ಸೂಕ್ತ ಪರಿಹಾರ ನೀಡಬೇಕು" ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷ ಬಸವರಾಜ ಕವಲಗಿ, ಉಪಾಧ್ಯಕ್ಷರು, ಕಾರ್ಯದರ್ಶಿ ಹಾಗೂ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.



# ಕಾಂಗ್ರೆಸ್ ಸಂಘಟನೆ ಬಲವರ್ಧನೆಗೆ ಹೊಸ ಚೈತನ್ಯ :ನ್ಯಾಮಗೌಡ

■ ಉದಯರಶ್ಮಿ ದಿನಪತ್ರಿಕೆ

## ಬಾಗಲಕೋಟೆ ನೂತನ ಜಿಲ್ಲಾ ಅಧ್ಯಕ್ಷ ದಯಾನಂದ ಪಾಟೀಲರಿಗೆ ಜಮ ಖಂಡಿಯಲ್ಲಿ ಆತ್ಮೀಯ ಸನ್ಮಾನ

ಜಮಖಂಡಿ: ಕಾಂಗ್ರೆಸ್ ಪಕ್ಷದ ಜಿಲ್ಲಾ ಅಧ್ಯಕ್ಷರಾಗಿ ನಿಯೋಜನೆಗೊಂಡ ಬಳಿಕ ಪ್ರಥಮ ಬಾರಿಗೆ ಜಮಖಂಡಿಗೆ ಆಗಮಿಸಿದ ದಯಾನಂದ ಪಾಟೀಲ ಅವರನ್ನು ಮಾಜಿ ಶಾಸಕ ಆನಂದ ನ್ಯಾಮಗೌಡ ಅವರ ಗೃಹ ಕಚೇರಿಯಲ್ಲಿ ಆತ್ಮೀಯವಾಗಿ ಸನ್ಮಾನಿಸಿ, ಹೃತ್ಪೂರ್ವಕ ಅಭಿನಂದನೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಆನಂದ ನ್ಯಾಮಗೌಡ ಅವರು ಮಾತನಾಡಿ, ದಯಾನಂದ ಪಾಟೀಲ ಅವರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ ಹೊಸ ಜವಾಬ್ದಾರಿ ವಹಿಸಿಕೊಂಡಿರುವುದು ಪಕ್ಷದ ಸಂಘಟನೆಗೆ ಮತ್ತಷ್ಟು ಬಲ ನೀಡುವ ವಿಶ್ವಾಸ ಮೂಡಿಸಿದೆ. ಅವರ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಪಕ್ಷವನ್ನು ಇನ್ನಷ್ಟು ಬಲಿಷ್ಠವಾಗಿ ಹಾಗೂ ಸಂಘಟಿತವಾಗಿ ಕಟ್ಟುವ ಕಾರ್ಯಕ್ಕೆ ವೇಗ ಸಿಗಲಿ ಎಂದು ಶುಭ ಹಾರೈಸಿದರು.

"ಪಕ್ಷದ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸುವ ಜೊತೆಗೆ ಜನರ ಸಮಸ್ಯೆಗಳಿಗೆ ಸ್ಪಂದಿಸಿ, ಜನಪರ ಕಾರ್ಯಗಳಿಗೆ ಮತ್ತಷ್ಟು ವೇಗ ದೊರೆಯುವಂತಾಗಲಿ" ಎಂದು ಆಶಿಸಿದರು.

ಸನ್ಮಾನ ಸ್ವೀಕರಿಸಿದ ದಯಾನಂದ ಪಾಟೀಲ ಅವರು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ತೋರಿದ ಪ್ರೀತಿ ಮತ್ತು ವಿಶ್ವಾಸಕ್ಕೆ ಕೃತಜ್ಞತೆ ಸಲ್ಲಿಸಿದರು. ಎಲ್ಲರ ಸಹಕಾರದೊಂದಿಗೆ ಪಕ್ಷ ಸಂಘಟನೆಗೆ ಆದ್ಯತೆ ನೀಡಿ, ಜನಪರವಾಗಿ ಕಾರ್ಯನಿರ್ವಹಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದು, ನೂತನ ಜಿಲ್ಲಾ ಅಧ್ಯಕ್ಷರಿಗೆ ಶುಭಾಶಯ ಕೋರಿದರು.

# ಸ್ಥಳೀಯ ಚುನಾವಣೆಗಳಿಗಾಗಿ ಕಾಂಗ್ರೆಸ್ ರಣತಂತ್ರ!



ಬೆಂಗಳೂರು: 2028ರ ವಿಧಾನಸಭಾ ಚುನಾವಣೆಗೂ ಮುನ್ನ ಮಹಾನಗರ ಪಾಲಿಕೆ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಸರಣಿ ಚುನಾವಣೆಗಳು ನಡೆಯುವ ನಿರೀಕ್ಷೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಹೈಕಮಾಂಡ್ ರಾಜ್ಯದಲ್ಲಿ ಪಕ್ಷದ ಸಂಘಟನಾ ಸಿದ್ಧತೆಗಳನ್ನು ಚುರುಕುಗೊಳಿಸಿದೆ.

ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್ (ಸಂಘಟನೆ) ಮತ್ತು ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಬುಧವಾರ ರಾಜ್ಯಕ್ಕೆ ಆಗಮಿಸಿ ಪಕ್ಷದ ರಾಜ್ಯ ನಾಯಕರೊಂದಿಗೆ ಸರಣಿ ಸಭೆ ನಡೆಸಿದರು.

ಪಕ್ಷದ ಸಂಘಟನೆ ಬಲಪಡಿಸುವುದು, ಆಂತರಿಕ ಸಮಸ್ಯೆಗಳನ್ನು ಬಗೆಹರಿಸುವುದು ಹಾಗೂ ಮುಂಬರುವ ಚುನಾವಣಾ ಸವಾಲುಗಳಿಗೆ ಕಾರ್ಯಕರ್ತರನ್ನು ಸಜ್ಜುಗೊಳಿಸುವ ಕುರಿತು ಸಭೆಗಳಲ್ಲಿ ಚರ್ಚಿಸಲಾಯಿತು. ಎಐಸಿಸಿ ಕಾರ್ಯದರ್ಶಿ ಗೋಪಿನಾಥ್ ಪಳನಿಯಪ್ಪನ್ ಕೂಡ ಅವರೊಂದಿಗೆ ಆಗಮಿಸಿದ್ದರು.

2023ರ ವಿಧಾನಸಭಾ ಚುನಾವಣೆಯಲ್ಲಿ ಗಳಿಸಿದ ಯಶಸ್ಸನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ, ರಾಜ್ಯ ಕಾಂಗ್ರೆಸ್‌ನ ವಿವಿಧ ಬಣಗಳನ್ನು ಒಗ್ಗೂಡಿಸಿಕೊಂಡು ಮುಂದಿನ ಸರಣಿ ಚುನಾವಣೆಗಳಿಗೆ ಸಜ್ಜಾಗುವ ಪ್ರಯತ್ನದಲ್ಲಿ ಪಕ್ಷ ತೊಡಗಿರುವ ಹಿನ್ನೆಲೆಯಲ್ಲಿ ನಾಯಕರ ಈ ಭೇಟಿ ಮಹತ್ವ ಪಡೆದುಕೊಂಡಿದೆ.

ವಿಶೇಷವಾಗಿ ನೂತನವಾಗಿ ನೇಮಕಗೊಂಡಿರುವ ಜಿಲ್ಲಾಧ್ಯಕ್ಷರ ನೇತೃತ್ವದಲ್ಲಿ ತಳಮಟ್ಟದಲ್ಲಿ ಪಕ್ಷದ ಸಂಘಟನಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಗುರಿಯನ್ನು ಕಾಂಗ್ರೆಸ್ ಹೊಂದಿದೆ.

35 ನೂತನ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರೊಂದಿಗೆ ನಡೆದ ಚಿಂತನ-ಮಂಥನ ಸಭೆಯಲ್ಲಿ ವೇಣುಗೋಪಾಲ್ ಮತ್ತು ಸುರ್ಜೇವಾಲಾ ಅವರು 'ಕಾರ್ಯನಿರ್ವಹಿಸಿ ಇಲ್ಲವೇ ಹಿಂದೆ ಸರಿಯಿರಿ' ಎಂಬ ಸ್ಪಷ್ಟ ಸಂದೇಶ ನೀಡಿದ್ದಾರೆ ಎನ್ನಲಾಗಿದೆ. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಿಗೆ ಸಜ್ಜಾಗುವಂತೆ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹ-ರಿಪ್ರಸಾದ್ ಅವರ ನೇತೃತ್ವದಲ್ಲಿ ಪಕ್ಷದ ಸಂಘಟನೆಯನ್ನು ಬಲಪಡಿಸುವಂತೆ ಸೂಚಿಸಿದ್ದಾರೆ ಎಂದು ತಿಳಿದುಬಂದಿದೆ.

ವೇಣುಗೋಪಾಲ್ ಮತ್ತು ಸುರ್ಜೇವಾಲಾ ಅವರು ಪ್ರತ್ಯೇಕವಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರನ್ನು ಖಾಸಗಿ ಹೋಟೆಲ್‌ನಲ್ಲಿ ಭೇಟಿಯಾಗಿ ಮಾತುಕತೆ ನಡೆಸಿದರು.

ನಿಗಮ ಮತ್ತು ಮಂಡಳಿಗಳಿಗೆ ಬಾಕಿ ಇರುವ ನೇಮಕಾತಿಗಳು ಹಾಗೂ ಎರಡು ಖಾಲಿ ಸಚಿವ ಸ್ಥಾನಗಳನ್ನು ಭರ್ತಿ ಮಾಡುವ ಕುರಿತು ಸಭೆಗಳಲ್ಲಿ ಚರ್ಚೆ ನಡೆಯಿತು.

ಇದೇ ವೇಳೆ ಎಐಸಿಸಿ ನಾಯಕರು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಹಾಗೂ ಸಚಿವರಾದ ರಾಮಲಿಂಗಾರೆಡ್ಡಿ, ಬೈರತಿ ಸುರೇಶ್, ಎಂ.ಬಿ. ಪಾಟೀಲ್ ಸೇರಿದಂತೆ ಹಲವು ನಾಯಕರನ್ನೂ ಭೇಟಿಯಾದರು.

ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಒಂದು ಕೋಟಿಗೂ ಅಧಿಕ ಮತದಾರರ ಹೆಸರುಗಳನ್ನು ತೆಗೆದುಹಾಕಿರುವ ಬಗ್ಗೆ ಅವರು ಅಸಮಾಧಾನ ವ್ಯಕ್ತಪಡಿಸಿದ್ದು, ಪಕ್ಷದ ಪ್ರಮುಖ ಮತದಾರರ ಹಿತಾಸಕ್ತಿಗಳನ್ನು ರಕ್ಷಿಸಲು ಸಚಿವರು ಹೆಚ್ಚು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದ್ದಾರೆ ಎನ್ನಲಾಗಿದೆ.

## ಕರ್ನಾಟಕದ ನಾಯಕರಿಗೆ ಸಂಘಟನಾ ಜವಾಬ್ದಾರಿ

2027ರಲ್ಲಿ ಉತ್ತರ ಪ್ರದೇಶ, ಪಂಜಾಬ್, ಉತ್ತರಾಖಂಡ, ಗೋವಾ, ಮಣಿಪುರ, ಗುಜರಾತ್ ಮತ್ತು ಹಿಮಾಚಲ ಪ್ರದೇಶ ಸೇರಿದಂತೆ ಹಲವು ರಾಜ್ಯಗಳಲ್ಲಿ ವಿಧಾನಸಭಾ ಚುನಾವಣೆಗಳು ನಡೆಯಲಿವೆ. ಈ ರಾಜ್ಯಗಳ ಪೈಕಿ ಕೆಲವು ಕಡೆ ಕರ್ನಾಟಕದ ನಾಯಕರಿಗೆ ಸಂಘಟನಾ ಜವಾಬ್ದಾರಿಗಳನ್ನು ವಹಿಸುವ ಸಾಧ್ಯತೆಯಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

## ಜಿಲ್ಲಾಧ್ಯಕ್ಷರ ಕಾರ್ಯಕ್ಷಮತೆ ಮೇಲೆ ಹೈಕಮಾಂಡ್ ಕಣ್ಣು। ಬೂತ್‌ನಿಂದ ಜಿಲ್ಲಾ ಮಟ್ಟದವರೆಗೆ ಸಂಘಟನೆಗೆ ಸೂಚನೆ



"ಎಐಸಿಸಿ ನಾಯಕರಿಂದ ಪಕ್ಷವನ್ನು ಬೂತ್ ಮಟ್ಟದಿಂದ ಜಿಲ್ಲಾಮಟ್ಟದವರೆಗೆ ಬಲ ಪಡಿಸುವುದು, ಕಾರ್ಯಕರ್ತ ರೊಂದಿಗೆ ನಿರಂತರ ಸಂಪರ್ಕದಲ್ಲಿರುವುದು, ಜನರ ಸಮಸ್ಯೆಗಳನ್ನು ಕೈಗೆತ್ತಿಕೊಳ್ಳುವುದು ಹಾಗೂ ಕಾಂಗ್ರೆಸ್ ಕಾರ್ಯಕ್ರಮಗಳು ಮತ್ತು ತತ್ವಗಳನ್ನು ಪ್ರತಿ ಮನೆಗೂ ತಲುಪಿಸುವಂತೆ ಸೂಚನೆ ನೀಡಲಾಗಿದೆ. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಿಗೆ ಸಿದ್ಧತೆ ನಡೆಸುವಂತೆ ಎಲ್ಲ ಜಿಲ್ಲಾಧ್ಯಕ್ಷರಿಗೂ ಸೂಚನೆ ನೀಡಲಾಗಿದೆ."

■ ಬಿ.ಕೆ.ಹರಿಪ್ರಸಾದ್
ಕೆಪಿಸಿಸಿ ಅಧ್ಯಕ್ಷರು

# ಕನಿಷ್ಠ ವೇತನ ಜಾರಿಗೆ ಒತ್ತಾಯಿಸಿ ಕಾರ್ಮಿಕರಿಂದ ಪತ್ರ ಚಳುವಳಿ

■ ಉದಯರಶ್ಮಿ ದಿನಪತ್ರಿಕೆ




ಆಲಮಟ್ಟಿ: ರಾಜ್ಯದ ವಿವಿಧ ಸರ್ಕಾರಿ ವಸತಿ ನಿಲಯಗಳಲ್ಲಿ ಅಡುಗೆ, ಸ್ವಚ್ಛತೆ, ಕಾವಲು ಸೇರಿದಂತೆ ವಿವಿಧ ಕೆಲಸಗಳನ್ನು ನಿರ್ವಹಿಸುತ್ತಿರುವ ಹೊರಗುತ್ತಿಗೆ ಕಾರ್ಮಿಕರಿಗೆ ಶಾಸನಬದ್ಧವಾಗಿ ನಿಗದಿಪಡಿಸಿರುವ ಪರಿಷ್ಕೃತ ಕನಿಷ್ಠ ವೇತನವನ್ನು ಕೂಡಲೇ ಜಾ-ರಿಗೊಳಿಸುವಂತೆ ಒತ್ತಾಯಿಸಿ ಸಂಯುಕ್ತ ಆಲಮಟ್ಟಿ ಕೆಬಿಜೆಎನ್‌ಎಲ್ ಗಾರ್ಡನ್ ಡಿ ಗ್ರೂಪ್ ನೌಕರರ ಸಂಘದ ವತಿಯಿಂದ ಶುಕ್ರವಾರ ಪತ್ರ ಚಳುವಳಿ ನಡೆಸಲಾಯಿತು.

ಕಾರ್ಮಿಕರು ಕಡಿಮೆ ವೇತನದಲ್ಲಿ ದುಡಿಯುತ್ತಿದ್ದು, ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಜೀವನಾವಶ್ಯಕ ವಸ್ತುಗಳ ಬೆಲೆಗಳ ನಡುವೆ ಕುಟುಂಬ ನಿರ್ವಹಣೆ ಕಷ್ಟಕರವಾಗಿದೆ. ಸರ್ಕಾರ ನಿಗದಿಪಡಿಸಿರುವ ಪರಿಷ್ಕೃತ ಕನಿಷ್ಠ ವೇತನವನ್ನು ಸಮರ್ಪಕವಾಗಿ ಪಾವತಿಸದಿರುವುದ-ರಿಂದ ಕಾರ್ಮಿಕರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ಸಂಘದ ಮುಖಂಡರು ತಿಳಿಸಿದರು.

ವಸತಿ ನಿಲಯ ಕಾರ್ಮಿಕರಿಗೆ ಪರಿಷ್ಕೃತ ಕನಿಷ್ಠ ವೇತನವನ್ನು ಕೂಡಲೇ ಜಾರಿಗೊಳಿಸಬೇಕು. ಪ್ರತಿ ತಿಂಗಳು ನಿಗದಿತ ದಿನಾಂಕದೊಳಗೆ ವೇತನ ಪಾವತಿಸಬೇಕು. ವೇತನ ಚೀಟಿ ನೀಡುವುದರೊಂದಿಗೆ ಪಿಎಫ್, ಇಎಸ್‌ಐ ಸೇರಿದಂತೆ ಕಾರ್ಮಿಕರಿಗೆ ದೊರೆಯಬೇಕಾದ ಎಲ್ಲ ಶಾಸನಬದ್ಧ ಸೌಲಭ್ಯಗಳನ್ನು ಖಾತರಿಪಡಿಸಬೇಕು ಎಂದು ಪತ್ರ ಚಳುವಳಿಯ ಮೂಲಕ ಮುಖ್ಯಮಂತ್ರಿ ಅವರಿಗೆ ಒತ್ತಾಯಿಸಲಾಯಿತು.

ಕಾರ್ಮಿಕರ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರ ಕೂಡಲೇ ಪರಿಗಣಿಸಿ ಸಂಬಂಧಿಸಿದ ಇಲಾಖೆ ಹಾಗೂ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕು. ಬೇಡಿಕೆಗಳನ್ನು ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಸಂಘದ ಮುಖಂಡರು ಎಚ್ಚರಿಸಿದರು. ಸಂಘದ ಮುಖಂಡರಾದ ದ್ಯಾಮಣ್ಣ ಬಿರಾದಾರ, ಎಸ್.ಸಿ. ಕುಂಬಾರ, ಅಖಂಡೇಶ ಬಡಿಗೇರ, ದಶರಥ, ಮೀನಾಕ್ಷಿ ರಾಠೋಡ, ಯಲ್ಲವ್ವ ಮೇಟಿ, ಮಕಬುಲ್ ಬಾಗವಾನ, ಚಂದ್ರು ಲಮಾಣಿ, ಲಕ್ಷ್ಮಣ್ಣ, ಸಂಗಮೇಶ ಯರನಾಳ, ಸುಸಲವ್ವ ಪಾಟೀಲ, ರಫೀಕ್ ಅಥಣಿ, ಮಹಾದೇವಯ್ಯ ಹಿರೇಮಠ, ರುಕ್ಮಿಣಿ ಮಾದರ, ರಮೇಶ ಅಸ್ಕಿ, ಹುಸೇನ ವಾಲಿಕಾರ,

ಸಂಗಮೇಶ ಯರನಾಳ, ಸುಸಲವ್ವ ಪಾಟೀಲ, ರಫೀಕ್ ಅಥಣಿ, ಮಹಾದೇವಯ್ಯ ಹಿರೇಮಠ, ರುಕ್ಮಿಣಿ ಮಾದರ, ರಮೇಶ ಅಸ್ಕಿ, ಹುಸೇನ ವಾಲಿಕಾರ ಸೇ-ರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ನೌಕರರು ಭಾಗವಹಿಸಿದ್ದರು.

## ಸಿಂದಗಿ ತಾಲ್ಲೂಕಿನ ಸೋಮಜಾಳ ಗ್ರಾಮದಲ್ಲಿ ಆಯೋಜನೆ | 5 ಕಿ.ಮೀ & 10 ಕಿ.ಮೀ ವಿಭಾಗ | ನೊಂದಣಿ ಪ್ರಕ್ರಿಯೆ ಆರಂಭ

# ನ.19 ರಂದು ಎ.ಬಿ.ಫೌಂಡೇಶನ್ ಅಡಿ ಮ್ಯಾರಥಾನ್ ಸ್ಪರ್ಧೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಸಿಂದಗಿ ತಾಲ್ಲೂಕಿನ ಸೋಮಜಾಳ ಗ್ರಾಮದಲ್ಲಿ ನ.19 ರಂದು ಆಕಾಶ ಬಿರಾದಾರ ಫೌಂಡೇಶನ್ ತನ್ನ ಎರಡನೆಯ ಮ್ಯಾರಥಾನ್ ಸ್ಪರ್ಧೆಯನ್ನು ಹಮ್ಮಿಕೊಂಡಿದೆ.

ನ.19 ರಂದು ಗುರುವಾರ ಸೋಮಜಾಳ ಗ್ರಾಮದಲ್ಲಿ ಬೆಳಗ್ಗೆ 7 ಗಂಟೆಗೆ ಆರಂಭವಾಗುವ ಈ ಮ್ಯಾರಥಾನ್ ಸ್ಪರ್ಧೆಯಲ್ಲಿ 5 ಕಿ.ಮೀ ಮತ್ತು 10 ಕಿ.ಮೀ ದೂರದ ಎರಡು ವಿಭಾಗಗಳನ್ನು ಮಾಡಲಾಗಿದೆ. 5 ಕಿ.ಮೀ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು ಗರಿಷ್ಠ ವಯೋಮಿತಿ 17 ವರ್ಷ ಮತ್ತು 10 ಕಿ.ಮೀ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು ಗರಿಷ್ಠ ವಯೋಮಿತಿ 20 ವರ್ಷ ಎಂದು ನಿಗದಿಪಡಿಸಲಾಗಿದೆ.

ಎರಡೂ ವಿಭಾಗದಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತಿಯ ಸ್ಥಾನಗಳ ವಿಜೇತರಿಗೆ ಕ್ರಮವಾಗಿ ರೂ.5000/-, ರೂ.3000/-, ಹಾಗೂ ರೂ.2000/- ಬಹುಮಾನದ ಮೊತ್ತವನ್ನು ನೀಡಲಾಗುತ್ತದೆ.

ಈಗಾಗಲೇ ಆನ್ಲೈನ್ ಮೂಲಕ ನೊಂದಣಿ ಪ್ರಕ್ರಿಯೆ ಆರಂಭಗೊಂಡಿದ್ದು ನೊಂದಣಿ ಹಾಗೂ ಹೆಚ್ಚಿನ ವಿವರಗಳಿಗೆ ಮೊಬೈಲ್ ಸಂಖ್ಯೆ 9945173172 ಗೆ ಮತ್ತು




Email: 16kbiradar@gmail.com ಇಲ್ಲಿ ಸಂಪರ್ಕಿಸಬೇಕೆಂದು ಎ.ಬಿ ಫೌಂಡೇಶನ್ ಸಂಸ್ಥಾಪಕರು ಮತ್ತು ಆಯೋಜಕರಾದ ಕೆ.ಎಸ್.ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



" ನಮ್ಮ ಗ್ರಾಮೀಣ ಭಾಗದ ಯುವಕರಲ್ಲಿ ಕ್ರೀಡಾಸಕ್ತಿ ಉತ್ತೇಜಿಸಲು ಮತ್ತು ಮ್ಯಾರಥ-ಾನ್ ಸ್ಪರ್ಧೆಯ ಕುರಿತು ಅರಿವು ಮೂಡಿಸಲು ಈಗ ಎರಡನೆಯ ಬಾರಿಗೆ ತಮ್ಮ ಪುತ್ರ ಆಕಾಶ ಬಿರಾದಾರ ಸ್ಮರಣಾರ್ಥ ಈ ಸ್ಪರ್ಧೆಯನ್ನು ಆಯೋಜಿಸುತ್ತಿರುವೆ. ಈ ಭಾಗದ ವಿದ್ಯಾರ್ಥಿಗಳು, ಯುವಕರು ಅಧಿಕ ಸಂಖ್ಯೆಯಲ್ಲಿ ಪಾಲ್ಗೊಂಡು ಈ ಮ್ಯಾರಥಾನ್ ಯಶಸ್ವಿಯಾಗಿಸಲು ಕೋರುವೆ."

■ ಕಲ್ಯಾಣಿ.ಎಸ್.ಬಿರಾದಾರ, (ಸೋಮಜಾಳ)
ಎನ್‌ಎಐಎಸ್ ತರಬೇತುದಾರರು ಊಟಿ (ತಮಿಳುನಾಡು) ಹಾಗೂ ನಿರ್ದೇಶಕರು, ಶ್ರೀ ಸತ್ಯಸಾಯಿಬಾಬಾ ವಿಮಾನ ನಿಲ್ದಾಣಪುಟ್ಟಪರ್ತಿ (ಆಂಧ್ರಪ್ರದೇಶ)

# ಮರಾಠಾ ಸಮುದಾಯಗಳ ಅಭಿವೃದ್ಧಿ ನಿಗಮದ ವಿವಿಧ ಯೋಜನೆ :ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026–27ನೇ ಸಾಲಿನಲ್ಲಿ ಮರಾಠಾ ಸಮುದಾಯಗಳ ಅಭಿವೃದ್ಧಿ ನಿಗಮದ ಮೂಲಕ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಸಾಲ ಮತ್ತು ಸೌಲಭ್ಯ ಯೋಜನೆಗಳಿಗೆ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಶ್ರೀ ಶಹಾಜಿರಾಜೇ ಸಮೃದ್ಧಿ ಯೋಜನೆಯ ಸ್ವಯಂ ಉದ್ಯೋಗ ನೇರ ಸಾಲ ಹಾಗೂ ಸಹಾಯಧನ ಜೀಜಾವು ಜಲಭಾಗ್ಯ–ಗಂಗಾ ಕಲ್ಯಾಣ ಯೋಜನೆ ಅರಿವು ಶೈಕ್ಷಣಿಕ ನೇರ ಸಾಲ ಯೋಜನೆ –ಹೊಸದು ಮತ್ತು ನವೀಕರಣ, ಮರಾಠ ಮಿಲಿಟರಿ ಹೋಟೆಲ್, ಸ್ವಾವಲಂಬಿ ಸಾರಥಿ ಯೋಜನೆ, ರಾಜ ಶ್ರೀಶಾಹು ಮಹಾರಾಜ ವಿದೇಶಿ ಸಾಲ ಯೋಜನೆ, ಸ್ವಾತಂತ್ರ ಅಮೃತ ಮುನ್ನಡೆ ಯೋಜನೆ, ಹೊಲಿಗೆ ಯಂತ್ರ ವಿತರಣಾ ಯೋಜನೆಗಳಿಗೆ ಅರ್ಹರು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು ಹಾಗೂ ಪ್ರವರ್ಗ–3ಬಿ (2ಎ ನಿಂದ 2ಎಫ್‌ವರೆಗೆ) ಸಮುದಾಯಕ್ಕೆ ಸೇ–ರಿರಬೇಕು. 18 ರಿಂದ 55 ವರ್ಷಗಳ ಒಳಗಿರಬೇಕು ಕುಟುಂಬದ ವಾರ್ಷಿಕ ಆದಾಯ ಮಿತಿ ಗ್ರಾಮಾಂತರ ಪ್ರದೇಶದವರಿಗೆ 98,000 ರೂ. ಹಾಗೂ ನಗರ ಪ್ರದೇಶಕ್ಕೆ 1,20,000 ರೂ. ಒಳಗಿರಬೇಕು.

ಅರ್ಜಿದಾರರ ಮೊಬೈಲ್ ಸಂಖ್ಯೆ ಮತ್ತು ಬ್ಯಾಂಕ್ ಖಾತೆಯು ಆಧಾರ್ ಸಂಖ್ಯೆಗೆ ಕಡ್ಡಾಯವಾಗಿ ಜೋಡಣೆಯಾಗಿರಬೇಕು. ಅರ್ಜಿ ಸಲ್ಲಿಕೆಗೆ ಅ. 3 ಕೊನೆಯ ದಿನವಾಗಿದೆ.

ಸೇವಾ ಸಿಂಧು ಪೋರ್ಟಲ್, ಬೆಂಗಳೂರು–ಒನ್, ಕರ್ನಾಟಕ–ಒನ್ ಅಥ–'ವಾ ಅಟಲ್–ಜಿ ಜನಸ್ನೇಹಿ ಕೇಂದ್ರಗಳ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ: ನಿಗಮದ ವೆಬ್‌ಸೈಟ್ kmcdc.karnataka.gov.in ಅಥವಾ ಜಿಲ್ಲಾ ವ್ಯವಸ್ಥಾಪಕರ ಕಚೇರಿಯನ್ನು ಹಾಗೂ ದೂರವಾಣಿ ಸಂಖ್ಯೆ: 080–29903994 ಹಾಗೂ 8867537799) ಸಂಪರ್ಕಿಸಬಹುದು ಎಂದು ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಪ್ರಕಟಣೆ ತಿಳಿಸಿದೆ.

# ಇಂದು ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ಕೈಗೆತ್ತಿಕೊಳ್ಳಲಾಗಿರುವ ರಸ್ತೆ ಅಗಲೀಕರಣ ಕಾಮಗಾರಿಯ ಹಿನ್ನೆಲೆಯಲ್ಲಿ 11 ಕೆವಿ ಮಾರ್ಗ ನಗರದ ಕೆ.ಸಿ. ನಗರ ಹಾಗೂ ಬಿ.ಎಲ್.ಡಿ.ಇ.11 ಕೆವಿ ವಿದ್ಯುತ್ ಮಾರ್ಗಗಳಲ್ಲಿ ಸೆ.19 ರಂದು 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಈ ವಿದ್ಯುತ್ ಮಾರ್ಗಗಳ ಮೇಲೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಹೆಸ್ಕಾಂದೊಂದಿಗೆ ಸಹಕರಿಸಬೇಕು ಎಂದು ಹೆಸ್ಕಾಂ ಕಾರ್ಯ ಮತ್ತು ಪಾಲನಾ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಡಾ.ರವಿ ಗೋಲಾ & ಡಾ.ಸಂದೀಪ ಪಾಟೀಲಗೆ ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ಬೆಳಗಾವಿ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ ಕ್ರೀಡಾ ಸಲಹಾ ಸಮಿತಿಯ ಸದಸ್ಯ ಡಾ.ರವಿ ಗೋಲಾ ಹಾಗೂ ದೇವರಗುಡ್ಡದ ಶ್ರೀ ಮಾಲತೇಶ ದೇವಸ್ಥಾನ ಪೀಠದ ಒಡೆಯ ಡಾ.ಸಂದೀಪ ಜೆ.ಪಾಟೀಲಗೆ (ಕ್ರಮವಾಗಿ) ಆದರ್ಶ ದೈಹಿಕ ನಿರ್ದೇಶಕ ಮತ್ತು ವೈದ್ಯಸೇವಾರತ್ನ ದೊರೆತಿದೆ.

ತಾಲೂಕಿನ ಬೋರಗಿ ಗ್ರಾಮದ ನಬಿರೋಶನ್ ಪ್ರಕಾಶನ ವತಿಯಿಂದ ಈ ಪ್ರಶಸ್ತಿ ಕೊಡಲಾಗುತ್ತಿದೆ. ಡಾ.ರವಿ ಗೋಲಾ ಕಳೆದ ಹಲವು ವರ್ಷಗಳಿಂದ ದೈಹಿಕ ಶಿಕ್ಷಣ ಕ್ಷೇತ್ರದಲ್ಲಿನ ಸೇವೆ ಹಾಗೂ ವೈದ್ಯಕೀಯ ಮತ್ತು ಧಾರ್ಮಿಕ ಕ್ಷೇತ್ರದಲ್ಲಿ ಆಲಮೇಲದ ಖ್ಯಾತ ವೈದ್ಯ ಡಾ.ಸಂದೀಪ ಪಾಟೀಲ ಇವರ ಸೇವೆಯನ್ನು ಪರಿಗಣಿಸಿ, ಇದೇ ಸೆಪ್ಟೆಂಬರ್ 21ರಂದು ಬೆಂಗಳೂ–ರಿನ ಕನ್ನಡ ಸಾಹಿತ್ಯ ಪರಿಷತ್ತಿನ ಕೃಷ್ಣರಾಜ ಪರಿಷತ್ಮಂದಿರದಲ್ಲಿ ಮಧ್ಯಾಹ್ನ 3:00 ಗಂಟೆಗೆ ನಡೆಯಲಿರುವ ಅಪ್ಪ ಪ್ರಶಸ್ತಿ ಪ್ರದಾನ ಹಾಗೂ ವಿವಿಧ ಸಾಂಸ್ಕೃತಿಕ ಸಮಾರಂಭದಲ್ಲಿ ಗಣ್ಯಾತೀಗಣ್ಯರ ಸಮ್ಮುಖದಲ್ಲಿ ಈ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ನಬಿರೋಶನ್ ಪ್ರಕಾಶನದ ಮೌಲಾಲಿ ಆಲಗೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಕ್ರೀಡಾಕೂಟದಲ್ಲಿ ತುಂಗಳ ಶಾಲೆ ವಿದ್ಯಾರ್ಥಿಗಳ ಸಾಧನೆ

■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: 2026–27ನೇ ಸಾಲಿನ ಕ್ಲಸ್ಟರ್ ಮಟ್ಟದ ಕ್ರೀಡಾಕೂಟವು ತಿಕೋಟಾ ತಾಲ್ಲೂಕಿನ ಕನಮಡಿ ಗ್ರಾಮದ ಶ್ರೀ ವರಸಿದ್ದಿ ವಿನಾಯಕ ಶಾಲೆಯಲ್ಲಿ ನಡೆಯಿತು. ಕ್ರೀಡಾಕೂಟದಲ್ಲಿ ಕನಮಡಿಯ ತುಂಗಲ ಇಂಟರ್‌ನ್ಯಾಷನಲ್ ಶಾಲೆಯ ವಿದ್ಯಾರ್ಥಿಗಳು ವಿವಿಧ ವೈಯಕ್ತಿಕ ಹಾಗೂ ಗುಂಪು ಆಟಗಳ ಸ್ಪರ್ಧೆಗಳಲ್ಲಿ ಉತ್ತಮ ಸಾಧನೆ ಮಾಡಿ ಶಾಲೆಗೆ ಕೀರ್ತಿ ತಂದಿದ್ದಾರೆ.

ವೈಯಕ್ತಿಕ ಸ್ಪರ್ಧೆ: ಚಕ್ರ ಎಸೆತದಲ್ಲಿ ರಾಮಗೊಂಡ ದೇವನಾಯಕ ಪ್ರಥಮ ಸ್ಥಾನ, 100 ಮೀಟರ್ ಓಟದಲ್ಲಿ ಅರಮಾನ ಸೌದಿ ದ್ವಿತೀಯ ಸ್ಥಾನ, 600 ಮೀಟರ್ ಓಟದಲ್ಲಿ ಶ್ರೀಲಕ್ಷ್ಮೀ ಹನಗಂಡಿ ತೃತೀಯ ಸ್ಥಾನ ಹಾಗೂ ಚಕ್ರ ಎಸೆತದಲ್ಲಿ ನಂದೀಶ ಮೈಸೂರು ತೃತೀಯ ಸ್ಥಾನ ಪಡೆದಿದ್ದಾರೆ.

ಗಂಡು ಮಕ್ಕಳ ಗುಂಪು ಆಟಗಳಲ್ಲಿ ಖೋ ಖೋ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಹಾಗೂ ಥ್ರೋಬಾಲ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ.

ಹೆಣ್ಣು ಮಕ್ಕಳ ಗುಂಪು ಆಟಗಳಲ್ಲಿ ವಾಲಿಬಾಲ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಹಾಗೂ ಥ್ರೋಬಾಲ್ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದು ಗಮನ ಸೆಳೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ತುಂಗಳ ಇಂಟರ್‌ನ್ಯಾಷನಲ್ ಸ್ಕೂಲ್‌ನ ಅಧ್ಯಕ್ಷ ಎಂ.ಆರ್. ತುಂಗಳ, ವಿಜಯಕುಮಾರ ತುಂಗಲ, ವಾಣಿ ವಿ. ತುಂಗಲ, ಪ್ರಾಂಶುಪಾಲೆ ಡಾ. ವಿನಿತಾ ಕೆ., ಉಪಪ್ರಾಂಶುಪಾಲ ಅರುಣಕುಮಾರ, ಕೆ.ಜಿ. ಸಂಂ–ಯೋಜಕಿ ನವಿನಾ ವಿ.ಕೆ. ಹಾಗೂ ದೈಹಿಕ ಶಿಕ್ಷಣ ಶಿಕ್ಷಕ ವಿಷ್ಣು ಪೂಜಾರಿ ಅಭಿನಂದನೆ ಸಲ್ಲಿಸಿದ್ದಾರೆ.

ವಿದ್ಯಾರ್ಥಿಗಳ ಕ್ರೀಡಾ ಪ್ರತಿಭೆಯನ್ನು ಗುರುತಿಸಿ, ಸೂಕ್ತ ತರಬೇತಿ ಹಾಗೂ ಪ್ರೋತ್ಸಾಹ ನೀಡುತ್ತಿರುವ ಶಾಲೆಯ ಆಡಳಿತ ಮಂಡಳಿ ಮತ್ತು ಶಿಕ್ಷಕರ ಕಾರ್ಯಕ್ಕೆ ಪೋಷಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆ ಆಯೋಜನೆ

# ಹಿರಿಯ ನಾಗರಿಕರು ಸಮಾಜದ ಆಸ್ತಿ :ನ್ಯಾ.ಅರವಿಂದ ಹಾಗರಗಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ದೇಹಕ್ಕೆ ವಯಸ್ಸಾಗುತ್ತದೆಯೇ ಹೊರತು ಮನಸ್ಸಿಗಲ್ಲ. ವಯಸ್ಸು ಕೇವಲ ಒಂದು ಸಂಖ್ಯೆಯಾಗಿದ್ದು, ಹಿರಿಯ ನಾಗರಿಕರು ತಮ್ಮ ಸುದೀರ್ಘ ಜೀವನದ ಅನುಭವ ಹಾಗೂ ಜ್ಞಾನವನ್ನು ಕಿರಿಯರೊಂದಿಗೆ ಹಂಚಿಕೊಳ್ಳುವ ಮೂಲಕ ಸಮಾಜ–ಕ್ಕೆ ಮಾರ್ಗದರ್ಶನ ನೀಡಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಎಸ್. ಹಾಗರಗಿ ಹೇಳಿದರು.

ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗ–ರಿಕರ ಸಬಲೀಕರಣ ಇಲಾಖೆಯ ಆಶ್ರಯದಲ್ಲಿ ವಿಶ್ವಹಿರಿಯ ನಾಗರಿಕರ ದಿನಾಚರಣೆ–2026ರ ಅಂಗವಾಗಿ ನಗರದ ನಗರದ ಕನಕದಾಸ ಬಡಾವಣೆಯ ಈಜುಕೊಳದ ಹತ್ತಿರದ ಒಳಾಂಗಣ ಕ್ರೀಡಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಹಿರಿಯ ನಾಗರಿಕರ ಕ್ರೀಡಾಕೂಟ ಹಾಗೂ ಸಾಂಸ್ಕೃತಿ–ಕ ಸ್ಪರ್ಧೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಿರಿಯ ನಾಗರಿಕರ ಹಕ್ಕುಗಳು ಹಾಗೂ ಕ್ಷೇಮಾಭಿವೃದ್ಧಿಗೆ ಕಾನೂನು ಸದಾ ಬೆಂಬಲವಾಗಿ ನಿಲ್ಲಲಿವೆ. ಹಿರಿಯರು ತಮ್ಮ ಮಾನಸಿಕ ಹಾಗೂ ದೈಹಿಕ ಆರೋಗ್ಯವನ್ನು ಉತ್ತಮವಾಗಿಟ್ಟುಕೊಳ್ಳಲು ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ವೃದ್ಧಾಪ್ಯವನ್ನು ಸವಾಲಾಗಿ ಸ್ವೀಕ–ರಿಸುವ ಬದಲು ಉತ್ಸಾಹದಿಂದ ಜೀವನವನ್ನು ಆನಂದಿಸಬೇಕು ಎಂದು ಅವರು ಹೇಳಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ರಾಜಶೇಖರ ಧೈವಾಡಿ ಮಾತನಾಡಿ, ಹಿರಿಯರ ಅಪಾರ ಅನುಭವ ಹಾಗೂ ಕಿರಿಯರ ಉತ್ಸಾಹ ಒಂದಾಗುವುದರಿಂದ ಸಮಾಜದ ಪ್ರಗತಿಗೆ ಮತ್ತಷ್ಟು ಬಲ ದೊರೆಯುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ನಿರ್ಮಲ ಸುರಪೂರ, ವಿಜಯಪುರ ಜಿಲ್ಲಾ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಸ್.ಪಿ. ಬಿರಾದಾರ, ನವರಸಪೂರದ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿ ವೈ.ಆರ್. ನಂದಿಹಳ್ಳಿ, ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಜಗದೀಶ ಕೆ. ಸೇ–ರಿದಂತೆ ವಿವಿಧ ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಹಿರಿಯ ನಾಗರಿಕರು ಉಪಸ್ಥಿತರಿದ್ದರು.

## ವಿಶ್ವಕರ್ಮ ಜಯಂತಿಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಅಭಿಮತ

# ಜ್ಞಾನದ ಜೊತೆಗೆ ಕೌಶಲ್ಯ ರೂಢಿಸಿಕೊಂಡಾಗ ಯಶಸ್ವಿ ಬದುಕು

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜ್ಞಾನದ ಜೊತೆಗೆ ಪ್ರತಿಯೊಬ್ಬರೂ ಕೌಶಲ್ಯವನ್ನು ರೂಢಿಸಿಕೊಂಡಾಗ ಮಾತ್ರ ಯಶಸ್ವಿ ಬದುಕು ರೂಪಿಸಿಕೊಳ್ಳಲು ಸಾಧ್ಯ ಎಂದು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಆಯೋಜಿಸಿದ್ದ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಭಗವಾನ ವಿಶ್ವಕರ್ಮರು ಸೃಜನಶೀಲತೆ, ಕೌಶಲ್ಯ, ಪರಿಶ್ರಮ ಹಾಗೂ ನಿರ್ಮಾಣ ಕಲೆಯ ಪ್ರತೀಕವಾಗಿದ್ದಾರೆ. ಭಾರತೀಯ ಪರಂಪರೆಯಲ್ಲಿ ವಿಶ್ವಕರ್ಮರಿಗೆ ವಿಶೇಷ ಸ್ಥಾನವಿದ್ದು, ದೇವಶಿಲ್ಪಿಯಾಗಿ ಪೂಜಿಸಲ್ಪಡುತ್ತಾರೆ ಎಂದು ಹೇಳಿದರು.

> ವಿಶ್ವಕರ್ಮರ ಭಾವಚಿತ್ರದ ಮೆರವಣಿಗೆ
>
> ವೇದಿಕೆ ಕಾರ್ಯಕ್ರಮಕ್ಕೂ ಮೊದಲು ನಗರದ ಶ್ರೀ ಸಿದ್ಧೇಶ್ವರ ದೇವಸ್ಥಾನದ ಆವರಣದಿಂದ ವಿಶ್ವಕರ್ಮರ ಭಾವಚಿತ್ರದ ಮೆರವಣಿಗೆ ಚಾಲನೆ ದೊರೆತು,ನಗರದ
>
> ಕಂದಗಲ್ ಶ್ರೀ ಕಂದಗಲ್ ಶ್ರಿ ಹನುಮಂತರಾಯ ರಂಗಮಂದಿರದಲ್ಲಿ ಸಮಾವೇಶಗೊಂಡಿತು.

ಜಿಲ್ಲಾಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ವಸಂತ ಹೊನಮೋಡೆ ಅವರು ವಿಶ್ವಕರ್ಮ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾಶೀನಥಕೋಣೆನವರಅವರುಉಪನ್ಯಾಸನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಮಹೇಶ ಪೋತದಾರ ಅವರು ಮಾತನಾಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ ಸ್ವಾಗತಿಸಿದರು. ಮೋಹನ ಕಟ್ಟಿಮನಿ ಕಾರ್ಯಕ್ರಮ ನಿರೂಪಿಸಿದರು. ಸಭಾ ಕಾರ್ಯಕ್ರಮದ ಅಂಗವಾಗಿ ಶ್ರೀದೇವಿ ಪತ್ತಾರ ಹಾಗೂ ತಂಡದವರಿಂದ ನಡೆದ ಸಂಗೀತ ಕಾರ್ಯಕ್ರಮವು ಸಭಿಕರ ಮನಸೂರೆಗೊಳಿಸಿತು.

ಕಾರ್ಯಕ್ರಮದಲ್ಲಿ ಮೂರುಜಾವರ ಮಠದ ಮಹೇಂದ್ರ ಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು.

ಜಿಲ್ಲಾ ಪಂಚಾಯಿತಿಯ ಉಪ ನಿರ್ದೇಶಕರಾದ ನಾಗಭೂಷಣ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಲ್ಲನಗೌಡ ಬಿರಾದಾರ, ವಲಯ ಉಪ ಆಯುಕ್ತ ಮೋಹನ ಜಾಧವ, ಮನೋಹರ ಪತ್ತಾರ ಸೇರಿದಂತೆ ವಿಶ್ವಕರ್ಮ ಸಮಾಜದ ಮುಖಂಡರು ಹಾಗೂ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಸಾರ್ವಜನಿಕರು ಉಪಸ್ಥಿತರಿದ್ದರು.

# ದೇವರಹಿಪ್ಪರಗಿಯಲ್ಲಿ ವಿಶ್ವಕರ್ಮ ಜಯಂತ್ಯುತ್ಸವ

■ ಉದಯರಶ್ಮಿ ದಿನಪತ್ರಿಕೆ




ದೇವರ ಹಿಪ್ಪರಗಿ: ವಿಶ್ವಸೃಷ್ಟಿಯ ವಿಶ್ವಕರ್ಮರು ಪರಬ್ರಹ್ಮ ಸ್ವರೂಪಿಯಾಗಿ ಎಲ್ಲರಿಗೂ ಮಾರ್ಗದರ್ಶನ ನೀಡಲಿ ಎಂದು ಶರಣ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕದ ಅಧ್ಯಕ್ಷ ಎಸ್.ಎನ್.ಬಸವರಡ್ಡಿ ಹೇಳಿದರು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯದಲ್ಲಿ ಗುರುವಾರ ಜರುಗಿದ ವಿಶ್ವಕರ್ಮ ಜಯಂತ್ಯೋತ್ಸವದಲ್ಲಿ ವಿಶ್ವಕರ್ಮ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ವಿಶ್ವಕರ್ಮ ಸಮುದಾಯ ಕಲೆ ಮತ್ತು ಕಾಯಕಕ್ಕೆ ಹೆಸರಾಗಿದ್ದು, ಸಮಾಜದ ಅವಿಭಾಜ್ಯ ಅಂಗವೆನಿಸಿದೆ. ವಿಶ್ವಕರ್ಮ ಸಮುದಾಯದ ಪ್ರತಿಯೊಬ್ಬ ವ್ಯಕ್ತಿ ಕಲೆಯ ಸೂಕ್ಷ್ಮತೆಯನ್ನು ಮೈಗೂಡಿಸಿಕೊಂಡು ಸಮಾಜ–ಕ್ಕೆ ತನ್ನದೇಯಾದ ಕೊಡುಗೆ ನೀಡುವುದರ ಮೂಲಕ ಪರಂಪರೆಯನ್ನು ಉಳಿಸಿ ಬೆಳೆಸುತ್ತಿದ್ದಾರೆ ಎಂದರು.

ತಹಶೀಲ್ದಾರನಿಂಗಣ್ಣಬಿರಾದಾರಅಧ್ಯಕ್ಷತೆವಹಿಸಿದ್ದರು.

ಗ್ರೇಡ್–2 ತಹಶೀಲ್ದಾರ ಎಂ.ಜಿ.ಬಿರಾದಾರ, ಶಿರಸ್ತೇದಾರ ಸುರೇಶ ಮ್ಯಾಗೇರಿ, ಮೂರುಜಾವದಮಠದ ವಿಶ್ವನಾಥ ಸ್ವಾಮೀಜಿ, ನಾಗಯ್ಯ ಮೂರುಜಾವದಮಠ, ಮೋನಯ್ಯ ಪಂಚಾಳಮಠ ವಿಶ್ವಕರ್ಮ ಸಂಘದ ಕಾರ್ಯದರ್ಶಿ ಸುರೇಶ ಬಡಿಗೇರ, ಮಹಾರುದ್ರ ಕಕ್ಕಳಮೇಲಿ, ಮಹೇಶ ದೊಡಮನಿ, ರಾಜು ಮಿರಗಿ, ಪ್ರಶಾಂತ ದೊಡಮನಿ, ಪ್ರಶಾಂತ ಬಡಿಗೇರ, ಸಿಬ್ಬಂದಿ ಶಿಲ್ಪಾ ಶಿಂಪಿ, ರಾಜು ಕಂಠಿ, ಸಂತೋಷ ತಳವಾರ, ಸುರೇಶ ಮಣೂರ ಇದ್ದರು.

# ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆ: ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮ 2026–27ನೇ ಸಾಲಿಗೆ ಒಕ್ಕಲಿಗ ಸಮುದಾಯದ ಅರ್ಹ–ರಿಂದ ವಿವಿಧ ಅಭಿವೃದ್ಧಿ ಯೋಜನೆಗಳು ಮತ್ತು ಸಾಲ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನಿಸಿದೆ.

ಸ್ವಯಂ ಉದ್ಯೋಗ ನೇರ ಸಾಲ ಯೋಜನೆ: 2.00 ಲಕ್ಷಗಳ ಘಟಕ ವೆಚ್ಚದಲ್ಲಿ ಗರಿಷ್ಠ 30,000 ಸಹಾಯಧನ ಹಾಗೂ ಶೇ. 4ರ ಬಡ್ಡಿದರದಲ್ಲಿ 1.70 ಲಕ್ಷ ಸಾಲ ಸೌಲಭ್ಯ ನೀಡಲಾಗುವುದು. ವಯೋಮಿತಿ: 18–55 ವರ್ಷದೊಳಗಿರಬೇಕು.

ಗಂಗಾ ಕಲ್ಯಾಣ ನೀರಾವರಿ ಯೋಜನೆ: ಸಣ್ಣ ಮತ್ತು ಅತಿಸಣ್ಣ ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸಲು 3.75 ಲಕ್ಷ ಘಟಕ ವೆಚ್ಚದಲ್ಲಿ 3.25 ಲಕ್ಷ ಸಹಾಯಧನ ನೀಡಲಾಗುವುದು. ಸ್ವಾವಲಂಬಿ ಸಾರಥಿ ಯೋಜನೆ: 4–ಚಕ್ರ ವಾಹನ ಖರೀದಿಗಾಗಿ ಸಾಲದ ಶೇ. 50 ರಷ್ಟು (ಗರಿಷ್ಠ 3.00 ಲಕ್ಷ) ಸಹಾಯಧನ ಮಂಜೂರು (ವಯೋಮಿತಿ: 21–45 ವರ್ಷ). ಸ್ವಯಂ ಉದ್ಯೋಗ ಸಾಲ ಯೋಜನೆ (ಬ್ಯಾಂಕುಗಳ ಸಹಯೋಗದೊಂದಿಗೆ): ಬ್ಯಾಂಕ್ ಸಾಲ ಪಡೆಯುವವರಿಗೆ ಶೇ. 20 ರಷ್ಟು (ಗ–ರಿಷ್ಠ 1.00 ಲಕ್ಷ) ಸಹಾಯಧನ ನೀಡಲಾಗುವುದು. ಶೈಕ್ಷಣಿಕ ಸಾಲ ಯೋಜನೆ: ದೇಶೀಯ ಉನ್ನತ ಶಿಕ್ಷಣ: ಶೇ.2ರ ಬಡ್ಡಿದರದಲ್ಲಿ ಕೋರ್ಸ್ ಅವಧಿಗೆ ಗರಿಷ್ಠ 4.00 ಲಕ್ಷದಿಂದ 5.00 ಲಕ್ಷದವರೆಗೆ ಸಾಲ ಸೌಲಭ್ಯ ನೀಡಲಾಗುವುದು. ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ: ಕ್ಯೂಎಸ್ ವರ್ಲ್ಡ್ ಯುನಿವರ್ಸಿಟಿ ರ್‍ಯಾಕಿಂ–ಗ್ 1000 ರೊಳಗಿನ ವಿದೇಶಿ ವಿವಿಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಶೂನ್ಯ ಬಡ್ಡಿದರದಲ್ಲಿ ಗರಿಷ್ಠ 50.00 ಲಕ್ಷದವರೆಗೆ ಸಾಲ ಸೌಲಭ್ಯ ನೀಡಲಾಗುವುದು.

ಸ್ವಾತಂತ್ರ ಅಮೃತ ಮುನ್ನಡೆ ಯೋಜನೆ: ಉದ್ಯೋಗಾಕಾಂಕ್ಷಿಗಳಿಗೆ ಐಟಿಐ, ಜಿಟಿ–ಟಿಸಿ,ವಿಟಿಯು ಮುಂತಾದ ಸಂಸ್ಥೆಗಳ ಮೂಲಕ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲಾಗವುದು.

ಅರ್ಜಿದಾರರು ಒಕ್ಕಲಿಗ ಸಮುದಾಯಕ್ಕೆ (ಪ್ರವರ್ಗ–3ಎ) ಸೇರಿರಬೇಕು. ಕುಟುಂಬದ ವಾರ್ಷಿಕ ಆದ–ಾಯ ಮಿತಿ ಗ್ರಾಮೀಣ ಪ್ರದೇಶದವರಿಗೆ 98,000 ರೂ. ಹಾಗೂ ನಗರ ಪ್ರದೇಶದವರಿಗೆ 1,20,000 ರೂ. ಇರಬೇಕು (ಒಂದು ಕುಟುಂಬದ ಒಬ್ಬ ಸದಸ್ಯರಿಗೆ ಮಾತ್ರ ಅವಕಾಶವಿದೆ). ಅರ್ಜಿ ಸಲ್ಲಿಕೆಗೆ ಸೆ. 30 ಕೊನೆಯ ದಿನಾಂಕ. ಆಸಕ್ತರು ಸೇವಾ ಸಿಂಧು ಪೋರ್ಟಲ್ (ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್) ಮೂಲಕ ಅರ್ಜಿ ಸಲ್ಲಿಸಬಹುದು. ಸ್ವಾತಂತ್ರ ಅಮೃತ ಮುನ್ನಡೆ ಯೋಜನೆಗೆ [https://www.kaushalkar.com](https://www.kaushalkar.com) ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: ನಿಗಮದ ಅಧಿಕೃತ ವೆಬ್‌ಸೈಟ್: https://kvcdc.karnataka.gov.in ಅಥವಾ ನಿಗಮದ ದೂರವಾಣಿ ಸಂಖ್ಯೆ: 08352–258128 ಅಥವಾ ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ವಿಜಯಪುರ ಕಚೇ–ರಿಯನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಪ್ರಕಟಣೆ ತಿಳಿಸಿದೆ.

# ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆ: ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ 2026–27ನೇ ಸಾಲಿಗೆ ನಿಗಮದ ವಿವಿಧ ಯೋಜನೆಗಳಡಿ ಸಾಲ ಮತ್ತು ಸಹಾಯಧನ ಸೌಲಭ್ಯ ಪಡೆಯಲು ಅರ್ಹ ರಿಂದ (ಸೇವಾ ಸಿಂಧು ಪೋರ್ಟಲ್) ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಅರ್ಜಿ ಸಲ್ಲಿಕೆಗೆ ಸೆ. 30 ಕೊನೆಯ ದಿನ. (ಶೈಕ್ಷಣಿಕ ಸಾಲದ ಯೋಜನೆಗಳನ್ನು ಹೊರತುಪಡಿಸಿ) ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು, ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಅರಿವು–ಶೈಕ್ಷಣಿಕ ನೇರಸಾಲ ಯೋಜನೆ (ಹೊಸದು ಹಾಗೂ ನವೀಕರಣ), ಗಂಗಾ ಕಲ್ಯಾಣ ಯೋಜನೆ (ಕನಿಷ್ಠ 2 ಎಕರೆ ಜಮೀನು ಹೊಂದಿರಬೇಕು), ಸ್ವಾವಲಂಬಿ ಸಾರಥಿ ಯೋಜನೆ, ವಿದೇಶಿ ವ್ಯಾಸಂಗ ಯೋಜನೆ (ವಾರ್ಷಿಕ ವರಮಾನ ರೂ. 15.00 ಲಕ್ಷದೊಳಗಿರಬೇಕು), ಸ್ವಾತಂತ್ರ ಅಮೃತ ಮುನ್ನಡೆ ಯೋಜನೆ, ಹೊಲಿಗೆ ಯಂತ್ರ / ಜೆಗ್ –ಜಾಗ್ ಯೋಜನೆಗಳಿಗೆ ಅರ್ಹರು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ವಿಶ್ವಕರ್ಮ ಸಮುದಾಯ ಹಾಗೂ ಅದರ ಉಪಜಾತಿಗಳಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿದೆ.

ಜನರಲ್ ಯೋಜನೆಗಳಿಗೆ 18 ರಿಂದ 55 ವರ್ಷದೊಳಗಿನವರಿರಬೇಕು. ಕುಟುಂಬದ ವಾರ್ಷಿಕ ಆದಾಯ ಗ್ರಾಮೀಣ ಪ್ರದೇಶಕ್ಕೆ 98,000 ರೂ. ಹಾಗೂ ನಗರ ಪ್ರದೇಶಕ್ಕೆ 1,20,000 ರೂ. ಒಳಗಿರಬೇಕು. ಅರ್ಜಿದಾರರ ಮೊಬೈಲ್ ಸಂಖ್ಯೆ ಮತ್ತು ಬ್ಯಾಂಕ್ ಖಾತೆ ಸಂಖ್ಯೆ ಆಧಾರ್ ಕಾರ್ಡ್‌ಗೆ ಜೋಡಣೆಯಾಗಿರಬೇಕು. ಮಹಿಳೆಯರಿಗೆ ಶೇ.33ರಷ್ಟು ವಿಕಲಚೇತನರಿಗೆ ಶೇ.5ರಷ್ಟು ಹಾಗೂ ತೃತೀಯ ಲಿಂಗಿಗಳಿಗೆ ಶೇ 1ರಷ್ಟು ಮೀಸಲಾತಿ ಕಲ್ಪಿಸಲಾಗಿದೆ. ಆಸಕ್ತರು ಬೆಂಗಳೂರು–ಒನ್, ಕರ್ನಾಟಕ–ಒನ್, ಅಟಲ್–ಜಿ ಜನಸ್ನೇಹಿ ಕೇಂದ್ರ ಅಥವಾ ನಾಗರಿಕ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ (ಸೇವಾ ಸಿಂಧು) ಮೂಲಕ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಿಗಮದ ಅಧಿಕೃತ ವೆಬ್‌ಸೈಟ್ https://kvcdcl.karnataka.gov.in ಅಥವಾ ದೂರವಾಣಿ ಸಂಖ್ಯೆ 080–22374848 / 7899899039 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ಜಿಲ್ಲಾ ವ್ಯವಸ್ಥಾಪಕರ ಪ್ರಕಟಣೆ ತಿಳಿಸಿದೆ.

# ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳು

■ ಉದಯರಶ್ಮಿ ದಿನಪತ್ರಿಕೆ


ಕೇವಲಪಾಠಗಳನ್ನುಓದುವಕಲಿಯುವಅಂಕಗಳನ್ನುಪಡೆಯುವ ಮೂಲಕ ಮಕ್ಕಳು ಶಾಲೆಯ ವಿದ್ಯಾಭ್ಯಾಸವನ್ನು ಪೂರೈಸಬಹುದು, ಆದರೆ ಬದುಕಿನ ಅಭ್ಯಾಸಕ್ಕೆ ಶಾಲೆಯ ಪಾಠ ಪ್ರವಚನಗಳ ಜೊತೆ ಪಠ್ಯೇತರವಾದ ಪ್ರಾಪಂಚಿಕ ವಿಷಯಗಳು ಕೂಡ ಅವಶ್ಯಕ.

ಕೆಲ ವರ್ಷಗಳ ಹಿಂದೆ ಫಸ್ಟ್ ರಾಂಕ್ ರಾಜು ಎಂಬ ಕನ್ನಡ ಚಲನಚಿತ್ರ ಎಲ್ಲೆಡೆ ಬಹಳಷ್ಟು ಸುದ್ದಿ ಮಾಡಿತ್ತು. ಈ ಚಿತ್ರದ ನಾಯಕ ತನ್ನ ತಂದೆ ತಾಯಿಯ ಒತ್ತಾಸೆಯ ಮೇರೆಗೆ ಕೇವಲ ಪಠ್ಯ ಚಟುವಟಿಕೆಯಲ್ಲಿ ಫಸ್ಟ್ ರಾಂಕ್ ಪಡೆಯುತ್ತಿರುತ್ತಾನೆಯೇ ಹೊರತು ಆತನಲ್ಲಿ ಎಳ್ಳಷ್ಟು ವ್ಯವಹಾರಿಕ ಸಾಮಾಜಿಕ ಜ್ಞಾನ ಇರುವುದಿಲ್ಲ. ಇದು ಪರಿಸ್ಥಿತಿಯ ವಿಡಂಬನೆಯನ್ನು ತೋರುತ್ತದೆ. ಸಂಘ ಜೀವಿ ಸಾಮಾಜಿಕ ಜೀವಿಯಾಗಿರುವ ಮನುಷ್ಯ ಪ್ರಾಪಂಚಿಕ ಜ್ಞಾನವನ್ನು ಹೊಂದಿರಲೇಬೇಕು. ಅದು ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಅತ್ಯವಶ್ಯಕ ಎಂಬ ಅರಿವನ್ನು ಪಾಲಕರು ಹೊಂದಿರಲೇಬೇಕು.

ಸಾಮಾನ್ಯವಾಗಿ ಮಕ್ಕಳಲ್ಲಿ ಎರಡು ವಿಧ. ಕೆಲವರು ಏಕ ಪಠ್ಯಗ್ರಾಹಿಗಳಾಗಿದ್ದು ಕಲಿಯುವ ಯಾವುದೇ ವಿಷಯವನ್ನು ಒಂದು ಬಾರಿ ಅವರಿಗೆ ಹೇಳಿದರೆ ಸಾಕು ತಕ್ಷಣವೇ ಗ್ರಹಿಸುವ ಅವರು ತಮ್ಮ ತರಗತಿಯ ಪಠ್ಯ ಚಟುವಟಿಕೆಗಳಲ್ಲಿ ಸದಾ ಮುಂದಿರುತ್ತಾರೆ, ಆದರೆ ಅದೇ ಮಕ್ಕಳು ಇತರ ವಿಷಯಗಳನ್ನು ಅಷ್ಟೇನೂ ಮುಖ್ಯ ಅಲ್ಲ ಎಂದು ಪರಿಭಾವಿಸಿ ಅವುಗಳಿಂದ ವಿಮುಖರಾಗುತ್ತಾರೆ. ಒಂದು ಬಲ್ಬನ್ನು ಹೋಲ್ಡರಿಗೆ ಹಾಕುವ, ಒಂದು ನಲ್ಲಿಯನ್ನು ಸರಿಯಾಗಿ ತಿರುಗಿಸಿ ನೀರು ಸೋರದಂತೆ ರಿಪೇರಿ ಮಾಡುವಷ್ಟು ಕ್ಷಮತೆ ಕೂಡ ಅವರಲ್ಲಿ ಇರುವುದಿಲ್ಲ.

ಮತ್ತೆ ಕೆಲವು ಮಕ್ಕಳು ಮನೆಯ ಎಲ್ಲಾ ಕೆಲಸಗಳನ್ನು ತಾವೇ ಹೊತ್ತು ಮಾಡುತ್ತಾರೆ, ತರಕಾರಿ ತರುವುದರಿಂದ ಹಿಡಿದು ತೊಳೆದು, ಹೆಚ್ಚಿ, ಅಡುಗೆ ಮಾಡಲು, ತಾಯಿಗೆ ಸಹಾಯ ಮಾಡುವ, ತಂದೆಯ ಬ್ಯಾಂಕ್ ಮತ್ತು ಪೋಸ್ಟ್ ಆಫೀಸಿನ ಕೆಲಸಗಳನ್ನು ತಾವೇ ನಿರ್ವಹಿಸುವ, ವಿವಿಧ ಕಚೇರಿಗಳಿಗೆ ಓಡಾಡಿ ಬಿಲ್ ಗಳನ್ನು ತುಂಬುವ, ತಕರಾರು ಅರ್ಜಿ ನೀಡುವ, ಹತ್ತು ಹಲವು ಕೆಲಸಗಳು ಅವರಿಗೆ ಕರಗತವಾಗಿರುತ್ತವೆ.. ಆದರೆ ಓದಿನಲ್ಲಿ ಹಿಂದೆ ಬಿದ್ದಿರುತ್ತಾರೆ.. ಇದಕ್ಕೆ ಕಾರಣ ಹಲವಾರು ಇರಬಹುದು.

ಮಕ್ಕಳ ಶೈಕ್ಷಣಿಕ ಚಟುವಟಿಕೆ ಆರಂಭವಾದಾಗಲೇ ಅವರ ಪಠ್ಯೇತರ ಚಟುವಟಿಕೆಗಳಿಗೂ ನಾವು ಉತ್ತೇಜನ ನೀಡಬೇಕು. ಮಕ್ಕಳು ಶಾಲೆಗೆ ಹೋಗಿ ಬಂದ ನಂತರ ತಮ್ಮ ಪಠ್ಯಪುಸ್ತಕಗಳನ್ನು, ಶಾಲೆಯ ಬ್ಯಾಗು, ಊಟದ ಡಬ್ಬಗಳನ್ನು ಆಯಾ ಸ್ಥಳಕ್ಕೆ ಎತ್ತಿ ಇಡುವುದರ ಮೂಲಕ ಶಾಲೆಗೆ ಒಯ್ದ ಸಾಮಾನುಗಳನ್ನು ಸರಿಯಾಗಿ ಮನೆಗೆ





ತರುವ ಮೂಲಕ, ಶಾಲೆಯಲ್ಲಿ ಹೇಳಿಕೊಟ್ಟ ಪಾಠವನ್ನು ಮನೆಯಲ್ಲಿ ಪಾಲಕರಿಗೆ ಬಂದು ಹೇಳಿ ಮನೆ ಪಾಠವನ್ನು ಬರೆಯುವ ಮೂಲಕ ಒಂದು ಜವಾಬ್ದಾರಿಯನ್ನು ನಿರ್ವಹಿಸಲು ಮಗುವಿಗೆ ಕಲಿಸಬೇಕು.

ಶಾಲೆಯಿಂದ ಬಂದ ನಂತರ ಆಟ ಪಾಠಗಳಿಗೆ ಸಮಯವನ್ನು ಹೊಂದಾಣಿಕೆ ಮಾಡಿಕೊಳ್ಳಲು, ಅಕ್ಕಪಕ್ಕದ ಮನೆಯವರ ಜೊತೆ ಮಾತನಾಡಲು ಮಕ್ಕಳು ಕಲಿಯಬೇಕು. ಮನೆಗೆ ಬಂದವರಿಗೆ ಕೂರಿಸಿ ನೀರು ಕೊಡುವ, ಅಂಗಡಿಯಿಂದ ಏನನ್ನಾದರೂ ತರುವ ತಾಯಿ ತಂದೆ ಮತ್ತು ಒಡಹುಟ್ಟಿದವರಿಗೆ ಬೇಕಾದ ಚಿಕ್ಕ ಪುಟ್ಟ ವಸ್ತುಗಳನ್ನು ಒದಗಿಸುವ, ಮನೆಯ ಚಿಕ್ಕ ಪುಟ್ಟ ಕೆಲಸಗಳನ್ನು ನಿರ್ವಹಿಸುವುದನ್ನು ಖಂಡಿತವಾಗಿಯೂ ಮಕ್ಕಳಲ್ಲಿ ರೂಢಿಸಬೇಕು.

ಇನ್ನು ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳನ್ನು ಮಕ್ಕಳಿಗೆ ಮನೆಯಲ್ಲಿ ರೂಢಿಸುವುದು ಹೇಗೆ ಎಂದು ಯೋಚಿಸಿದರೆ ಶಾಲೆಯಲ್ಲಿ ಏ ಫಾರ್ ಆಪಲ್, ಬಿ ಫಾರ್ ಬಾಲ್, ಸಿ ಫಾರ್ ಕ್ಯಾಟ್ ಎಂದು ಮಾತ್ರ ಹೇಳಿಕೊಟ್ಟಿರುತ್ತಾರೆ. ಇದಕ್ಕೆ ಪರ್ಯಾಯವಾಗಿ ಮಕ್ಕಳಿಗೆ ಮನೆಯಲ್ಲಿ ಆಯಾ ಅಕ್ಷರಗಳಿಗೆ ದೊರೆಯುವ ಇತರ ಪದಗಳನ್ನು ಪರಿಚಯಿಸಬೇಕು. ಡಬ್ಲ್ಯೂ ಫಾರ್ ವಾಚ್ ಮಾತ್ರ ಅಲ್ಲ ವಾಲ್ ಕೂಡ ಆಗಬಹುದು, ಕೆ ಫರ್ ಕಿಂಗ್ ಮಾತ್ರವಲ್ಲ ನೈಫ್ ಕೂಡ ಆಗಬಹುದು. ಎಲ್ ಫಾರ್ ಲೈಟ್ ಹೀಗೆ ಮನೆಯಲ್ಲಿ ಇರುವ 10 ಹಲವು ವಸ್ತುಗಳನ್ನು ಅವರಿಗೆ ಆಯಾ ಅಕ್ಷರಗಳ ಮೂಲಕ ಪರಿಚಯಿಸಬೇಕು. ಇದು ಅವರ ಪಠ್ಯೇತರ ಚಟುವಟಿಕೆಯಾಗುತ್ತದೆ. ಆಟವು ಪಾಠವಾಗಿ ತೋರಿ ಮಕ್ಕಳು ಹೆಚ್ಚಿನ ಆಸಕ್ತಿ ವಹಿಸಲು ಕಾರಣವಾಗುತ್ತದೆ.


ಇದು ಭಾಷಾ ಚಟುವಟಿಕೆಯಾದರೆ ಶಾಲೆಯಲ್ಲಿ ಮಕ್ಕಳಿಗೆ ಸಂಖ್ಯೆಗಳನ್ನು ಕಲಿಸಿದಾಗ 123 ಹೀಗೆ ಆಯಾ ಸಂಖ್ಯೆಗಳ ಪ್ರಮಾಣದ ವಸ್ತುಗಳನ್ನು ಗುರುತಿಸುವ, ಹೇಳುವ ಚಟುವಟಿಕೆಯನ್ನು ಮಕ್ಕಳಿಂದ ಮಾಡಿಸಬಹುದು. ತುಸು ದೊಡ್ಡವರಾಗುತ್ತಾ ಕೂಡಿಸುವ, ಕಳೆಯುವ ಲೆಕ್ಕಗಳನ್ನು ಕಲಿತಾಗ ನಮ್ಮ ಎರಡು ಕೈಗಳ ಬೆರಳುಗಳು ಮತ್ತು ಕಾಲು ಬೆರಳುಗಳನ್ನು ಬಳಸಿ ಕೂಡಿಸುವ ಮತ್ತು ಕಲೆಯುವ ಬಾಯಿ ಲೆಕ್ಕಗಳನ್ನು ಮಾಡುವ ಮೂಲಕ ಗೋಲಿಗಳನ್ನು ಕೈಯಲ್ಲಿ ಮುಚ್ಚಿ ಹಿಡಿದು ಸರಿ ಬೆಸ ಆಡುವ ಮೂಲಕ ಮಕ್ಕಳಿಗೆ ಲೆಕ್ಕಗಳನ್ನು ಕಲಿಸಬಹುದು.

ಮಕ್ಕಳಿಗೆ ನಿನ್ನ ಬಳಿ ಎಂಟು ಹಣ್ಣುಗಳಿವೆ ಅದರಲ್ಲಿ ಎರಡು ಹಣ್ಣುಗಳನ್ನು ನೀನು ತಿಂದರೆ ನಿನ್ನ ಬಳಿ ಎಷ್ಟು ಹಣ್ಣುಗಳು ಉಳಿಯುತ್ತವೆ ಎಂದು ಕೇಳಿ ಮಕ್ಕಳಿಗೆ 8 ಹಣ್ಣುಗಳನ್ನು ಕೈಯಲ್ಲಿ ಲೆಕ್ಕ ಮಾಡಿ ಹಿಡಿಸಿ ಅದರಲ್ಲಿ ಎರಡು ಬೆರಳುಗಳನ್ನು ಮಡಿಸಿ ಕಳೆದು ಎತ್ತಿದ ಆರು ಬೆರಳುಗಳನ್ನು ತೋರಿ ಎಣಿಸಿ ಆರು ಎಂದು ಹೇಳಿ ಕಳೆಯುವ ಕೂಡುವ ಲೆಕ್ಕಗಳನ್ನು ಮಾಡುವುದನ್ನು ಕಲಿಸಬೇಕು.




ವೀಣಾ ಹೇಮಂತ್ ಗೌಡ ಪಾಟೀಲ್.
ಮುಂಡರಗಿ – ಗದಗ

ಮುಂದೆ ಮಕ್ಕಳು ಸಮಾಜ ವಿಜ್ಞಾನ ಪಾಠವನ್ನು ಕಲಿಯುವಾಗ ನಮ್ಮ ಸಾಮಾಜಿಕ ನೀತಿ ನಿಯಮಗಳನ್ನು ಭೂಮಿಯ ಮೇಲೆ ಇರುವ ವಿವಿಧ ಖಂಡಗಳನ್ನು, ದೇಶಗಳನ್ನು ಗುರುತಿಸುವ ಆಯಾ ದೇಶದ ಭಾಷೆ, ಸಂಸ್ಕೃತಿ, ಜೀವನ ಶೈಲಿ,ಉದ್ಯೋಗ, ವ್ಯಾಪಾರ ವ್ಯವಹಾರ ವಾಣಿಜ್ಯಾತ್ಮಕ ವಿಷಯಗಳ ಕುರಿತು ಅರಿವು ಮೂಡುತ್ತದೆ.



ಸಂವಿಧಾನ ಸಂರಚನೆ, ಗ್ರಾಮ, ತಾಲೂಕು, ಜಿಲ್ಲೆ, ವಿಭಾಗಗಳ, ರಾಜ್ಯ, ದೇಶದ ಪರಿಕಲ್ಪನೆ ಚುನಾವಣೆ ಪ್ರಕ್ರಿಯೆಗಳು ಮುಂತಾದ ಪೌರನೀತಿಯ ವಿಷಯಗಳ ಅರಿವು ಮೂಡುತ್ತದೆ. ಹಾಗೆಯೇ ಈ ಹಿಂದೆ ನಮ್ಮನ್ನು ಆಳಿದ ವಂಶಗಳ ರಾಜ ಮಹಾರಾಜರುಗಳ, ಚಕ್ರವರ್ತಿಗಳು ಅವರು ಮಾಡಿದ ಕಾರ್ಯಗಳು ಯುದ್ಧಗಳು ಶಿಲಾ ಶಾಸನಗಳು ಕೃತಿಗಳ ಇತಿಹಾಸಕಾರರ ಪರಿಚಯವಾಗುತ್ತದೆ.

ನಾವು ಸಾಮಾನ್ಯವಾಗಿ ನೋಡುವ ಎಲೆಗೆ ಆ ಬಣ್ಣ ಬರಲು




ಕಾರಣ ಪತ್ರಹರಿತ್ತು ಎಂಬ ವಸ್ತು ಎಂಬುದನ್ನು ವಿಜ್ಞಾನದಲ್ಲಿ ಕಲಿಯುತ್ತಾರೆ. ವಸ್ತುಗಳ ಸ್ಥಿತಿಗಳು, ವೈಜ್ಞಾನಿಕ ಮಹತ್ವಗಳು ಹೀಗೆ ಹತ್ತು ಹಲವು ವಿಷಯಗಳನ್ನು ಮಕ್ಕಳು ವಿಜ್ಞಾನದಲ್ಲಿ ಕಲಿಯುತ್ತಾರೆ.

ಹೀಗೆ ಹಂತ ಹಂತವಾಗಿ ಮಕ್ಕಳು ಕಲಿಯುವ ಪಠ್ಯ ಚಟುವಟಿಕೆಗಳಿಗೆ ಸಮಾನಾಂತರವಾಗಿ ಆ ವಿಷಯಗಳಿಗೆ ಸಂಬಂಧಪಟ್ಟ ಪಠ್ಯೇತರ ಚಟುವಟಿಕೆಗಳನ್ನು ಕಲಿಸಬೇಕು. ಹೀಗೆ ಮಕ್ಕಳು ಪಾಥಮಿಕ, ಮಾಧ್ಯಮಿಕ ಮತ್ತು ಪ್ರೌಢಶಾಲೆಗಳಲ್ಲಿ ಇರುವಾಗ ಮಕ್ಕಳಿಗೆ ಕಡ್ಡಾಯವಾಗಿ ವೈವಿಧ್ಯಮಯ ಚಟುವಟಿಕೆಗಳನ್ನು ರೂಢಿಸಬೇಕು.

ಹೀಗೆ ರೂಢಿಸಿದ ಮಕ್ಕಳು ಮುಂದೆ ಪಿಯುಸಿ ಮತ್ತು ಪದವಿ ತರಗತಿಗಳಿಗೆ ಓದುವಾಗ ತಮ್ಮದೇ ಆದ ರೀತಿಯಲ್ಲಿ ತಮ್ಮ ಆಸಕ್ತಿಯ ವಿಷಯಗಳಲ್ಲಿ ಚಟುವಟಿಕೆಗಳನ್ನು ಆಯ್ದುಕೊಂಡು ಪ್ರಾಯೋಗಿಕವಾಗಿ ಕಾರ್ಯನಿರ್ವಹಿಸುತ್ತಾರೆ.

ಶಾಲೆಯಲ್ಲಿ ಮಕ್ಕಳು ಕಲಿತ ಪಾಠಗಳನ್ನು ಅರಿತುಕೊಂಡಾಗ ಅವರ ಪ್ರತಿಕ್ರಿಯೆ ಸಂತೋಷ ಮತ್ತು ಮುಂದೇನು ಎಂಬ ಕುತೂಹಲವನ್ನು ಹೊಂದಿರುತ್ತದೆ.

ಸಾಮಾನ್ಯವಾಗಿ ಪುಸ್ತಕಗಳನ್ನು, ಕಾದಂಬರಿಗಳನ್ನು ಓದುವ, ಧಾರಾವಾಹಿಗಳನ್ನು ನೋಡುವ ಜನರು ಯಾವ ರೀತಿ ಮುಂದೇನಾಗುತ್ತದೆ ಎಂದು ವಿಷಯದೆಡೆಗೆ ಆಸಕ್ತಿ ವಹಿಸುತ್ತಾರೆಯೋ ಅಂತೆಯೇ ಪಠ್ಯದ ವಿಷಯಗಳು ಅರ್ಥವಾದ ಮಕ್ಕಳು ಕುತೂಹಲವನ್ನು ತೋರುತ್ತಾರೆ.

ಈ ರೀತಿ ವಿಷಯಗಳನ್ನು ನೈಸರ್ಗಿಕವಾಗಿ, ಪ್ರಾಯೋಗಿಕವಾಗಿ ಮಕ್ಕಳು ಕಲಿತಾಗ ಅವರಲ್ಲಿ ಸಹಜವಾಗಿಯೇ ಮೂಡುವ ಆಸಕ್ತಿ ನಾನೂ ಕೂಡ ಏನನ್ನಾದರೂ ಮಾಡಬಲ್ಲೆ ಎಂಬ ಧೈರ್ಯವನ್ನು ಆತ್ಮ ವಿಶ್ವಾಸವನ್ನು ನೀಡುತ್ತದೆ. ಶೈಕ್ಷಣಿಕ ಬದಲಾವಣೆ ಮೂಡುತ್ತದೆ.. ಆದ್ದರಿಂದ ಪಾಲಕರು ಮಕ್ಕಳಲ್ಲಿ ಕಲಿಕಾ ಶಕ್ತಿ ಹೆಚ್ಚಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲೇಬೇಕು.

ಪಠ್ಯಕ್ಕೆ ಪೂರಕವಾದ ಪಠ್ಯೇತರ ಚಟುವಟಿಕೆಗಳನ್ನು ನಡೆಸುವ ಮೂಲಕ ಮಕ್ಕಳ ಶೈಕ್ಷಣಿಕ ಬೆಳವಣಿಗೆಯಲ್ಲಿ ಸಮಗ್ರ ಬದಲಾವಣೆಯನ್ನು ತರಬಹುದು. ಆಸಕ್ತಿ ಇಲ್ಲದ ಮಕ್ಕಳು ಕೂಡ ಈ ರೀತಿಯ ಕಲಿಕೆಯಲ್ಲಿ ಕೆಲವೇ ತಿಂಗಳುಗಳಲ್ಲಿ ಉತ್ತಮ ಕಲಿಕಾ ಸಾಮರ್ಥ್ಯವನ್ನು ಗಳಿಸಿಕೊಂಡು ಮುನ್ನಡೆಯುಬಹುದು. ವೈವಿಧ್ಯಮಯ ಕಲಿಕೆಗೆ ತಮ್ಮನ್ನು ತಾವು ಒಡ್ಡಿಕೊಂಡು ಬದುಕಿನಲ್ಲಿ ಮುಂದೆ ಬರುತ್ತಾರೆ ಆದ್ದರಿಂದ ಮಕ್ಕಳಿಗೆ ಪಠ್ಯ ಚಟುವಟಿಕೆಗಳ ಜೊತೆ ಜೊತೆಗೆ ಮಗುವಿನ ಭದ್ರ ಭವಿಷ್ಯಕ್ಕೆ ಬುನಾದಿಯಾಗಿರುವ ಪಠ್ಯೇತರ ಚಟುವಟಿಕೆಗಳು ಅತ್ಯವಶ್ಯಕವಾಗಿ ಇರಲೇಬೇಕು.

# ಅಸಾಧ್ಯವಾದುದನ್ನೂ ಸಾಧ್ಯವಾಗಿಸಬಲ್ಲ ಧನಾತ್ಮಕ ಸಂಪರ್ಕ

■ ಉದಯರಶ್ಮಿ ದಿನಪತ್ರಿಕೆ

ಶ್ರವಣ್ ಅದಾಗಲೇ ತನ್ನ ಎಂ.ಬಿ.ಎ ವಿದ್ಯಾಭ್ಯಾಸವನ್ನು ಡಿಸ್ಟಿಂಕ್ಷನ್‌ನಲ್ಲಿ ಮುಗಿಸಿದ್ದನು. ಒಂದು ಒಳ್ಳೆಯ ಬಹುರಾಷ್ಟ್ರೀಯ ಕಂಪನಿಯಲ್ಲಿ ಆಡಳಿತಾಧಿಕಾರಿಯ ಕೆಲಸವನ್ನೂ ಪಡೆದುಕೊಂಡನು. ಶ್ರವಣ್'ನದ್ದು ಒಂದು ಸಂಪ್ರದಾಯಸ್ಥ ಕುಟುಂಬವಾಗಿದ್ದು, ಶ್ರವಣ್ ಮತ್ತು ಆತನ ತಂದೆ ದೇವರಾಜ್ ಮಧ್ಯೆ ಉತ್ತಮವಾದ ಗೆಳೆಯರ ರೀತಿಯ ಸಂಬಂಧವಿತ್ತು. ಅದೇ ರೀತಿ ಶ್ರವಣ್‌ಗೆ ತನ್ನ ತಂದೆ ಮೇಲೆ ಅತಿಯಾದ ಗೌರವವೂ ಇತ್ತು.

ಹೀಗಿರುವಾಗ ಒಂದು ದಿನ ದೇವರಾಜ್ ಅವರು, 'ಮಗನೇ ನಿನಗೆ ನಾನು ನನಗಿಷ್ಟವಾದ ಕುಟುಂಬದ ಒಂದು ಹುಡುಗಿಯನ್ನು ನೋಡಿ ನಿನಗೆ ಮದುವೆ ಮಾಡಬೇಕೆಂದು ನಿರ್ಧರಿಸಿದ್ದೇನೆ'ಎಂದು








ಹೇಳಿದರು. ಆಗ ಶ್ರವಣ್ ಇಲ್ಲಪ್ಪಾ, 'ನಾನು ಮದುವೆ ಆಗುವ ಹುಡುಗಿಯನ್ನು ನಾನೇ ಆಯ್ಕೆ ಮಾಡಿಕೊಳ್ಳುತ್ತೇನೆ'ಎಂದು ಹೇಳಿದ. ಆಗ ತಂದೆಯು, 'ಹುಡುಗಿಯ ಆಯ್ಕೆಯನ್ನು ನೀನೇ ಮಾಡಿಕೊಳ್ಳುವುದಾದರೆ ಆ ಹುಡುಗಿ ಬಿಲ್‌ಗೇಟ್ಸ್ ಮಗಳೇ ಆಗಿರಬೇಕು' ಎಂದು ಸವಾಲು ಹಾಕಿದರು. ಆಗ ಶ್ರವಣ್ ನಗುತ್ತಾ 'ಸರಿಯಪ್ಪಾ, ಹಾಗೆಯೇ ಆಗಲಿ'ಎಂದು ಆ ಸವಾಲನ್ನು ಸ್ವೀಕರಿಸಿದ.

ಮರುದಿನವೇ ನನ್ನ ಮಾತೂ ಉಳಿಯಬೇಕು, ಮಗನ ಆಸೆಯೂ ಈಡೇರಬೇಕು ಎಂಬ ಉದ್ದೇಶದಿಂದ ದೇವರಾಜ್ ಅವರು ನೇರವಾಗಿ ಬಿಲ್‌ಗೇಟ್ಸನ್ನು ಭೇಟಿ ಮಾಡಲು ನಿರ್ಧರಿಸಿದರು. ಬಿಲ್‌ಗೇಟ್ಸನ್ನು ಭೇಟಿ ಮಾಡಿದ ದೇವರಾಜ್, 'ನಾನು ನಿಮ್ಮ ಮಗಳಿಗೆ ಮದುವೆ ಮಾಡಲು ಒಬ್ಬ ಹುಡುಗನನ್ನು ನೋಡಿದ್ದೇನೆ'ಎಂದು ಹೇಳಿದರು. ಆದರೆ 'ನನ್ನ ಮಗಳಿಗೆ ಮದುವೆ ಮಾಡುವಷ್ಟು ವಯಸ್ಸು ಇನ್ನೂ ಆಗಿಲ್ಲ' ಎಂದು ಬಿಲ್‌ಗೇಟ್ಸ್ ನಕಾರಾತ್ಮಕವಾಗಿ ಹೇಳಿದರು. ಆಗ ದೇವರಾಜ್ 'ನೀವು ಹೇಳೊದೇನೋ ಸರಿ, ಆದರೆ ನಾನು ನಿಮ್ಮ ಮಗಳಿಗೆ ನೋಡಿರುವ ಹುಡುಗ ವಿಶ್ವಬ್ಯಾಂಕಿನ ಸಿ.ಇ.ಓ'ಎಂದು ಹೇಳಿದರು. ಈ ಮಾತನ್ನು ಕೇಳಿದ ಬಿಲ್‌ಗೇಟ್ಸ್ ಖುಷಿಯಿಂದ 'ಓಹೋ ಹೌದಾ, ಹುಡುಗ ವಿಶ್ವಬ್ಯಾಂಕಿನ ಸಿ.ಇ.ಓ ಹೌದಾದರೆ ಸರಿ, ನನ್ನ ಮಗಳಿಗೆ ಮದುವೆ ಮಾಡಲು ನಾನು ಸಿದ್ಧನಿದ್ದೇನೆ' ಎಂದು ತಿಳಿಸಿದರು.

ಪ್ರಥಮ ಹಂತದ ಯಶಸ್ಸಿನ ನಂತರ ಕೊನೆಯದಾಗಿ ದೇವರಾಜ್ ಅವರು ವಿಶ್ವಬ್ಯಾಂಕಿನ ಅಧ್ಯಕ್ಷರನ್ನು ಭೇಟಿ ಮಾಡಿ, ಸರ್ ನಮಸ್ತೆ, ನೀವು ವಿಶ್ವಬ್ಯಾಂಕಿನ ಅಧ್ಯಕ್ಷರು, ನಿಮಗೆ ಕೆಲಸದ ಒತ್ತಡ ಅತಿಯಾಗಿರುತ್ತದೆ. ನೀವ್ಯಾಕೆ ಇನ್ನೊಬ್ಬ ಕಾರ್ಯನಿರ್ವಹಣಾ ಅಧಿಕಾರಿಯನ್ನು ಆಯ್ಕೆ ಮಾಡಿಕೊಳ್ಳಬಾರದು? ಇದರಿಂದ ನಿಮ್ಮ ಕೆಲಸದ ಒತ್ತಡವು ಕಡಿಮೆಯಾಗುತ್ತದೆ. 'ನೀವು ಒಪ್ಪಿದರೆ ನಾನು ನಿಮ್ಮ ವಿಶ್ವಬ್ಯಾಂಕಿಗೆ ವಿದ್ಯಾವಂತ ಮತ್ತು ಚತುರ ಸಿ.ಇ.ಓನನ್ನು ಸೂಚಿಸುತ್ತೇನೆ'ಎಂದು ವಿಶ್ವಬ್ಯಾಂಕಿನ ಅಧ್ಯಕ್ಷರಿಗೆ ಹೇಳಿದರು. ಆಗ




– ಸಂತೋಷ್ ರಾವ್ ಪೆರ್ಮುಡ.
ಪಟ್ರಮೆ ಗ್ರಾಮ ಮತ್ತು ಅಂಚೆ
ಬೆಳ್ತಂಗಡಿ ತಾಲೂಕು
ದ.ಕ ಜಿಲ್ಲೆ–574198
ದೂ: 9742884160

ವಿಶ್ವಬ್ಯಾಂಕಿನ ಅಧ್ಯಕ್ಷರು 'ಆದರೆ ನನಗೆ ಈಗಾಗಲೇ ಹಲವು ಮಂದಿ ಸಿ.ಇ.ಓಗಳು ಇದ್ದಾರೆ, ಹಾಗಾಗಿ ನನಗೆ ಹೆಚ್ಚುವರಿ ಸಿ.ಇ.ಓ ನ ಅವಶ್ಯಕತೆ ಇಲ್ಲ' ಎಂದು ಖಡಾಖಂಡಿತವಾಗಿ ತಿಳಿಸಿದರು. ಆಗ ತನ್ನ ಬುದ್ಧಿವಂತಿಕೆ ಉಪಯೋಗಿಸಿದ ದೇವರಾಜ್ ಅವರು, 'ಸರಿ ಸರ್, ಆದರೆ ನಾನು ಸೂಚಿಸುವ ಹುಡುಗ ವಿಶ್ವದ ಅತ್ಯಂತ ಶ್ರೀಮಂತ ವ್ಯಕ್ತಿ ಬಿಲ್‌ಗೇಟ್ಸ್ ಅವರ ಅಳಿಯ' ಎಂದು ಹೇಳಿದರು.

ಈ ಮಾತನ್ನು ಕೇಳಿ ಆಶ್ಚರ್ಯಕ್ಕೆ ಒಳಗಾದ ವಿಶ್ವಬ್ಯಾಂಕಿನ ಅಧ್ಯಕ್ಷರು, 'ಹೌದಾ, ಆ ಹುಡುಗ ಬಿಲ್'ಗೇಟ್ಸರ ಅಳಿಯನೇ ಹೌದಾದರೆ ನೀವು ಸೂಚಿಸುವ ವ್ಯಕ್ತಿಯನ್ನು ವಿಶ್ವಬ್ಯಾಂಕಿನ ಹೆಚ್ಚುವರಿ ಸಿ.ಇ.ಓ ಆಗಿ ನಾನು ಆಯ್ಕೆ ಮಾಡಿಕೊಳ್ಳುತ್ತೇನೆ'ಎಂದು ತಿಳಿಸಿದರು.

ದೇವರಾಜ್ ಅವರ ಈ ವಿಭಿನ್ನವಾದ ಪ್ರಯತ್ನದಿಂದ ತಂದೆಯ ಸವಾಲೂ ಪೂರೈಸಲ್ಪಟ್ಟಿತು, ಮಗ ಸ್ವೀಕರಿಸಿದ ಸವಾಲೂ ಸಾಕಾರವಾಯಿತು,ಮಗನಿಗೆಬಿಲ್‌ಗೇಟ್ಸ್‌ಮಗಳೊಂದಿಗೆಮದುವೆಯೂ ಆಯಿತು, ಮಗನಿಗೆ ವಿಶ್ವಬ್ಯಾಂಕ್‌ನ ಸಿ.ಇ.ಓ ಹುದ್ದೆಯೂ ದೊರೆಯಿತು.

ಸಾಧ್ಯವೇ ಇಲ್ಲದ ಒಂದು ಕೆಲಸವು ಹೇಗೆ ತನ್ನ ಧನಾತ್ಮಕವಾದ ಯೋಚನೆ, ಮನೋಭಾವ, ಸಂಪರ್ಕಿಸುವ ರೀತಿ ಮತ್ತು ಸಂವಹನದ ಶೈಲಿಯಿಂದ ವ್ಯಕ್ತಿಗಳನ್ನು ಒಪ್ಪಿಸುವ ಮೂಲಕ ಸಾಧ್ಯವಾಯಿತು ಎಂದು ತಿಳಿಯಬಹುದು.

ಈ ಕಾಲ್ಪನಿಕ ಕಥೆಯ ಸಾರಾಂಶ ಹೀಗಿದೆ, 'ವ್ಯಕ್ತಿಯೊಬ್ಬನಲ್ಲಿ ಏನು ಇಲ್ಲವೆಂದರೂ ಪರವಾಗಿಲ್ಲ, ಆತ ಎಲ್ಲವನ್ನೂ ಗಳಿಸಿಕೊಳ್ಳಲು ಖಂಡಿತಾ ಸಾಧ್ಯವಿದೆ. ಆದರೆ ಆ ವ್ಯಕ್ತಿಯ ಮನೋಧರ್ಮ ಮತ್ತು ಇತರರೊಂದಿಗೆ ಮಾತನಾಡುವ ರೀತಿ ಎಂದಿಗೂ ಧನಾತ್ಮಕವಾಗಿ ಇರಬೇಕು ಅಷ್ಟೇ'.

# ರಾಜಾಜಿ ನಗರದ ಗಜಾನನ ಮಂಡಳಿಯಲ್ಲಿ ದಾಸವಾಣಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ರಾಜಾಜಿ ನಗರ ಶ್ರೀ ಗಜಾನನ ತರುಣ ಮಂಡಳಿಯಿಂದ ಆಂಜನೇಯ ದೇವಸ್ಥಾನದಲ್ಲಿ ರಾತ್ರಿ ಸುಮಾರು ಹೊತ್ತಿನವರೆಗೆ ಶ್ರೀಮತಿ ಹರಿಣಿ ಸಂದೀಪ ಅರ್ಜುಣಗಿ ಅವರಿಂದ ದಾಸವಾಣಿ ಕಾರ್ಯಕ್ರಮ ಶಾಸ್ತ್ರೋಕ್ತವಾಗಿ ಜರುಗಿತು.

ಈ ದಾಸವಾಣಿ ಕಾರ್ಯಕ್ರಮಕ್ಕೆಹಾರ್ಮೋನಿಯಂ ಬಿ.ಎಂ.ಪತ್ತಾರ, ತಬಲಾ ಸಾಥ ಜಗನ್ನಾಥ ಅಳ್ಳಗಿ ಹಾಗೂ ಶ್ರೀನಾಥ ಪತ್ತಾರ ತಾಳ ವಾದ್ಯ ಮಾಡಿದ್ದು ಒಂದು ವಿಶೇಷವಾಗಿತ್ತು.

ಇದಕ್ಕೂ ಪೂರ್ವದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಂಗಾಧರ ಸಂಬಣ್ಣಿ, ಸ್ವಾಮಿ ವಿವೇಕಾನಂದ ಸೇನೆ ಅಧ್ಯಕ್ಷ ಚಂದ್ರು ಚೌದರಿ, ಮಲ್ಲು ತೊರವಿ ಹಾಗೂ ಪ್ರಸನ್ನ ಜಾಬನ್ನವರ ಅವರನ್ನು ಗಜಾನನ ತರುಣ ಮಂಡಳಿಯಿಂದ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಗುರುರಾಜ ಪೂಜಾರಿ, ಗುರುರಾಜ ಹಜೇರಿ, ಶರಣು ಮಾದನಶೆಟ್ಟಿ, ಗೋಪಾಲ ಹೊರ್ತಿ, ವೇಣು ಜೋಶಿ, ಮಂಜುನಾಥ ಮಲ್ಲಾಡಿ, ಶ್ರೀನಾಥ ಪತ್ತಾರ, ಉಮೇಶ ತೇಲಿ, ಮಹಾದೇವ ಕೋಲಕಾರ, ಸುಭಾಷ ಕನ್ನೂರ, ಮಂಜು ಬಿರಾದಾರ, ಸಿದ್ದು ಚವ್ಹಾಣ, ಸಂತೋಷ ಕುಲಕರ್ಣಿ ಹಾಗೂ ಬಡಾವಣೆಯ ಗಣ್ಯರು ಭಾವಹಿಸಿದ್ದರು.

## ವಿಜಯಪುರದಲ್ಲಿ ಕಲಾವಿದೆ ಸವಿತಾ ಜಾದವ ಅವರ ಕಲಾಕೃತಿಗಳ ಪ್ರದರ್ಶನ ಉದ್ಘಾಟನೆ

# ಚಿತ್ರಕಲೆಯು ಕನ್ನಡನಾಡಿನ ಸಾಂಸ್ಕೃತಿಕ ಅಸ್ಮಿತೆ :ವಿದ್ಯಾಶ್ರೀ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಚಿತ್ರಕಲೆಯು ಕನ್ನಡ ನಾಡಿನ ಸಾಂಸ್ಕೃತಿಕ ಅಸ್ಮಿತೆಯಾಗಿದೆ. ಚಿತ್ರಕಲಾವಿದರು ನಾಡಿನ ಸಾಂಸ್ಕೃತಿಕ ಪರಂಪರೆಗೆ ತಮ್ಮದೇ ಆದ ಮಹತ್ವದ ಕೊಡುಗೆ ನೀಡುತ್ತಿದ್ದಾರೆ. ವಿಜಯಪುರದ ಯುವ ಕಲಾವಿದೆ ಶ್ರೀಮತಿ ಸವಿತಾ ಜಾದವ ಅವರ ಕಲಾಕೃತಿಗಳು ಹಲವಾರು ವೈಶಿಷ್ಟ್ಯಗಳಿಂದ ಕೂಡಿವೆ. ನಿಸರ್ಗ ಚಿತ್ರ ರೇಖಾ ಚಿತ್ರಗಳು ಸಾಂಪ್ರದಾಯಕ ಶೈಲಿ ಹೀಗೆ ಹಲವಾರು ವೈವಿಧ್ಯಮಯ ಕಲಾಕೃತಿಗಳ ಪ್ರದರ್ಶನವು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಧನಸಹಾಯದೊಂದಿಗೆ ಏರ್ಪಡಿಸಿರುವುದು ಅತ್ಯಂತ ಶ್ಲಾಘನೀಯ ಕಾರ್ಯ. ಎಂದು ಪ್ರೇರಣಾ ಶಾಲೆಯ ಕನ್ನಡ ಶಿಕ್ಷಕಿ ವಿದ್ಯಾಶ್ರೀ ಶಿರನಾಳ ಹೇಳಿದರು.

ಅವರು ನಗರದ ಸರ್ಕಾರಿ ಆರ್ಟ್ ಗ್ಯಾಲರಿಯಲ್ಲಿ ಏರ್ಪಡಿಸಿದ್ದ ಕಲಾವಿದೆ ಸವಿತಾ ಜಾದವ ಅವರ ಕಲಾಕೃತಿಗಳ ಪ್ರದರ್ಶನ ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಹಿರಿಯ ಸಾಹಿತಿ, ಕಲಾ ಇತಿಹಾಸಕಾರರು ಆದ ಡಾ. ವಿ.ಎಂ. ಭಾಗಯತ್ ಅವರು ಮಾತನಾಡುತ್ತಾ, ವಿಜಯಪುರ ಆದಿಲ್ ಶಾಹಿ ಕಾಲದಿಂದಲೂ ಚಿತ್ರಕಲೆಯಲ್ಲಿ ತನ್ನದೇ ಆದ ಮಹತ್ವದ ಪರಂಪರೆ ಹೊಂದಿದೆ. ಇಂತಹ ನಾಡಿನ ಕಲಾವಿದರು ನಾಡಿನ ಉದ್ದಗಲಕ್ಕೂ ತಮ್ಮ ಕಲಾಕೃತಿಗಳ ಮೂಲಕ ವಿಜಯಪುರದ ಪರಂಪರೆ ಮುನ್ನಡೆಸುತ್ತಿದ್ದಾರೆ. ಇಂಥ ಕಾರ್ಯಕ್ಕೆ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮೂಲಕ ಪ್ರೋತ್ಸಾಹ ನೀಡುತ್ತಿರುವುದು ಅತ್ಯಂತ ಮಹತ್ವದ್ದಾಗಿದೆ. ಕಲಾವಿದೆ ಸವಿತಾ ಅವರು ತಮ್ಮದೇ ಆದ ಶೈಲಿಯಲ್ಲಿ ಕಲಾಕೃತಿಗಳನ್ನು ರಚಿಸುತ್ತ ಉತ್ತಮ ಕಲಾವಿದೆಯಾಗಿ ತಮ್ಮ ಕಲಾಕೃತಿಗಳ ಮೂಲಕ ವಿಜಯಪುರದ ಹೆಮ್ಮೆಯನ್ನು ಕಲಾಸಕ್ತರಿಗೆ ಉಣಬಡಿಸುತ್ತಿದ್ದಾರೆ. ಇವರು ಪರಿಶ್ರಮದಿಂದ ಕಲಾಕೃತಿಗಳ ರಚನೆ ನಿರಂತರವಾಗಿ ಮುಂದುವರೆಯಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಿರಿಯ ಕಲಾವಿದರಾದ ಪಿ. ಎಸ್ ಕಡೇಮನಿ ಅವರು ಮಾತನಾಡುತ್ತಾ, ನಮ್ಮ ಜಿಲ್ಲೆಯು ಕಲೆ, ಸಾಹಿತ್ಯ, ಸಂಸ್ಕೃತಿಕ ಕ್ಷೇತ್ರದಲ್ಲಿ ಅತ್ಯಂತ ಪ್ರಭಾವ ಶಾಲಿಯಾಗಿ ತನ್ನದೇ ಆದ ಛಾಪನ್ನು ಮೂಡಿಸಿದೆ. ಜಿಲ್ಲೆಯಲ್ಲಿ ರಾಷ್ಟ್ರ ಅಂತರಾಷ್ಟ್ರೀಯ, ಮತ್ತು ರಾಜ್ಯಮಟ್ಟದ ಹಲವರು ಕಲಾವಿದರು ಇದ್ದರೂ ಮಹಿಳಾ ಕಲಾವಿದರ ಸಂಖ್ಯೆ ಕಡಿಮೆ ಇದೆ. ಅದರಲ್ಲಿ ಸವಿತಾ ಜಾಧವ ಅವರು ತಮ್ಮ ಉತ್ತಮ ಕಲಾಕೃತಿಗಳನ್ನು ರಚಿಸುವ ಮೂಲಕ ಗಮನಾರ್ಹ ಸಾಧನೆ ಮಾಡುತ್ತಿದ್ದಾರೆ. ಕಲಾವಿದೆಯು ಜೊತೆಗೆ ಕಲಾಶಿಕ್ಷಕಿಯಾಗಿಯೂ ಮಕ್ಕಳಲ್ಲಿ ಕಲಾ ಪ್ರಜ್ಞೆ ಮೂಡಿಸುವಲ್ಲಿ ಸಕ್ರಿಯರಾಗಿದ್ದಾರೆ. ಇಂಥಾ ಕಲಾವಿದರಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಧನ ಸಹಾಯ ನೀಡಿ ಪ್ರೋತ್ಸಾಹಿಸುತ್ತಿರುವುದು ಸಂತೋಷದ ಸಂಗತಿ ಎಂದರು.

ಕಾರ್ಯಕ್ರಮದಲ್ಲಿ ಹಿರಿಯ ಕಲಾವಿದರಾದ ವಿದ್ಯಾಧರ ಸಾಲಿ, ಬಿ.ಎಸ್.ಪಾಟೀಲ, ವಿ.ವಿ.ಹಿರೇಮಠ,ಎಂ.ಕೆಪತ್ತಾರ, ಗಂಗಾಧರ ಮಾಯಾಚಾರಿ, ಲಿಂಗರಾಜ ಕಾಚಾಪೂರ, ಪ್ರಶಾಂತ್ ಮನಗೂಳಿ, ಶಬ್ಬೀರ್ ನದಾಫ್, ಕೃಷ್ಣಾ ಮಾನೆ, ಸಹಿತ ಹಲವಾರು ಕಲಾವಿದರು, ಕಲಾಸಕ್ತರು ಇದ್ದರು.

ಕಲಾವಿದ ರಮೇಶ ಚವ್ಹಾಣ ಪ್ರಾಸ್ತಾವಿಕವಾಗಿ ಮಾತನಾಡಿ, ನಿರೂಪಣೆ ಮಾಡಿದರು. ಹಿರಿಯ ಕಲಾವಿದ ವಿದ್ಯಾಧರ ಸಾಲಿ ವಂದನಾರ್ಪಣೆ ನೆರವೇರಿಸಿ ದರು.

# ವಿಜಯಪುರದಲ್ಲಿ ಪ್ರಜಾಸೇವಾ ಅಭಿಯಾನ ಇಂದು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಜಯಪುರ ನಗರದಲ್ಲಿ ಸೆಪ್ಟೆಂಬರ್ 19ರಂದು ಪ್ರಜಾಸೇವಾ ಅಭಿಯಾನ ತಾಲೂಕ ಮಟ್ಟದ ಕಾರ್ಯಕ್ರಮ ಆಯೋಜಿಸಲಾಗಿದೆ. ವಿಜಯಪುರ ನಗರದ ಎಪಿಎಂಸಿ ಸಮೀಪದ ನೀಲಕಂಠೇಶ್ವರ ಮಂಗಳ ಕಾರ್ಯಾಲಯದಲ್ಲಿ ಬೆಳಿಗ್ಗೆ 9 ಗಂಟೆಯಿಂದ ಕಾರ್ಯಕ್ರಮ ನಡೆಯಲಿದ್ದು, ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಾರ್ಯಕ್ರಮದಲ್ಲಿ ಖುದ್ದಾಗಿ ಹಾಜರಿದ್ದು, ಅಭಿಯಾನವನ್ನು ಯಶಸ್ವಿಗೊಳಿಸಲು ಸಕ್ರಿಯವಾಗಿ ಭಾಗವಹಿಸುವಂತೆ ವಿಜಯಪುರ ತಹಶೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ವಿದ್ಯುತ್ ಕುಂದು–ಕೊರತೆ: ಗ್ರಾಹಕರ ಸಂವಾದ ಸಭೆ ಇಂದು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ವಿಜಯಪುರ ತಾಲೂಕಿನ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗಕ್ಕೆ ಸಂಬಂಧಿಸಿದಂತೆ ಇಂದು ಮಧ್ಯಾಹ್ನ

3 ಗಂಟೆಗೆ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಕಛೇರಿಯಲ್ಲಿ ರೈತರು ಹಾಗೂ ಗ್ರಾಹಕರೊಂದಿಗೆ ವಿದ್ಯುತ್ ಸಮಸ್ಯೆಗಳ ಪರಿಹಾರಕ್ಕೆ ಗ್ರಾಹಕರ ಸಂವಾದ ಸಭೆ ಆಯೋಜಿಸಲಾಗಿದೆ.

ಹೆಸ್ಕಾಂ ಗ್ರಾಮೀಣ ಉಪ ವಿಭಾಗದ ಕಛೇ–ರಿಗೆ ಒಳಪಡುವ ಗ್ರಾಮಗಳ ಗ್ರಾಹಕರು ಹಾಗೂ ಸಾರ್ವಜನಿಕರು ಸಂವಾದ ಸಭೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳುವಂತೆ ವಿಜಯಪುರ ಗ್ರಾಮೀಣ ಉಪ ವಿಭಾಗದ ಹೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




# ಪ್ರಜಾಪ್ರಭುತ್ವದ ಬಲವರ್ಧನೆಗೆ ಯುವಜನರ ಪಾತ್ರ ಅನನ್ಯ

■ ಉದಯರಶ್ಮಿ ದಿನಪತ್ರಿಕೆ

**ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಯುವ ಮತದಾರರ ಮಿಂಚಿನ ನೋಂದಣಿ ಅಭಿಯಾನ**

ವಿಜಯಪುರ: ಪ್ರಜಾಪ್ರಭುತ್ವದ ಬಲವರ್ಧನೆಗೆ ಯುವಜನರ ಪಾತ್ರ ಮಹತ್ವದ್ದಾಗಿದ್ದು, 18 ವರ್ಷ ಪೂರ್ಣಗೊಂಡ ಪ್ರತಿಯೊಬ್ಬರೂ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಮತದಾನದ ಹಕ್ಕು ಚಲಾಯಿಸಬೇಕು ಎಂದು ಪದವಿಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಕೆ.ಎ. ಉಪ್ಪಾರ ಕರೆ ನೀಡಿದರು.

ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಮತದಾರರ ಸಾಕ್ಷರತಾ ಕ್ಲಬ್ (ಇಎಲ್‌ಸಿ) ವತಿಯಿಂದ ಆಯೋಜಿಸಿದ್ದ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ–2026 ಹಾಗೂ ಯುವ ಮತದಾರರ ಮಿಂಚಿನ ನೋಂದಣಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲಾ ಇಎಲ್‌ಸಿ ನೋಡಲ್ ಅಧಿಕಾರಿ ಎಂ.ಬಿ. ರಜಪೂತ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಆಐರ್) ಪ್ರಕ್ರಿಯೆಯ ಉದ್ದೇಶ ಹಾಗೂ ಮಹತ್ವವನ್ನು ವಿವ–ರಿಸಿದರು. ಕಾಲೇಜಿನ ಪ್ರಾಚಾರ್ಯ ಪಿ.ಎ. ಮೇತ್ರಿ ಮಾತನಾಡಿ, ಮತದಾರರ ಸಾಕ್ಷರತೆ ಪ್ರತಿಯೊಬ್ಬರ ಹಕ್ಕು ಹಾಗೂ ಕರ್ತವ್ಯವಾಗಿದ್ದು, ಇಂತಹ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಂಡು ಇತರರಲ್ಲಿಯೂ ಮತದಾನದ ಕುರಿತು ಜಾಗೃತಿ ಮೂಡಿಸಬೇಕು ಎಂದರು.


ಇದೇ ಸಂದರ್ಭದಲ್ಲಿ ಕಾಲೇಜಿನ ಸುಮಾರು 30 ಅರ್ಹ ವಿದ್ಯಾರ್ಥಿಗಳ ನಮೂನೆ–6 ಭರ್ತಿ ಮಾಡಿಸಿ ಸ್ಥಳದಲ್ಲಿಯೇ ನೋಂದಣಿ ಪ್ರಕ್ರಿಯೆ ಕೈಗೊಳ್ಳಲಾಯಿತು. ಹಿರಿಯ ಉಪನ್ಯಾಸಕರಾದ ಸಿ.ಟಿ.ಯಾಳಗಿ ಹಾಗೂ ಬಿ.ಎಸ್.ಗೌರಿ, ಎಸ್.ಸಿ. ತೋಳನೂರ, ಆರ್.ಸಿ. ಹಿರೇಮಠ, ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸೆ.19–20 ರಂದು ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ವಿಶೇಷ ಆಂದೋಲನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ–2026 ಅಂಗವಾಗಿ ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಸಂಬಂಧಿಸಿದಂತೆ ಜಿಲ್ಲೆಯಾದ್ಯಂತ ಸೆಪ್ಟೆಂಬರ್ 19 ಮತ್ತು 20ರಂದು ಎರಡು ದಿನಗಳ ಕಾಲ ವಿಶೇಷ ಆಂದೋಲನ ಹಮ್ಮಿಕೊಳ್ಳಲಾಗಿದೆ. ಈ ಎರಡು ದಿನಗಳಂದು ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎ) ಅವರು ಲಭ್ಯವಿದ್ದು, ಮತದಾರರು ತಮ್ಮ ಮತಗಟ್ಟೆಗಳಿಗೆ ಭೇಟಿ ನೀಡಿ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ.

ಮತದಾರರ ಪಟ್ಟಿಗೆ ಹೊಸದಾಗಿ ಹೆಸರು ಸೇರ್ಪಡೆ, ಹೆಸರು ತಿದ್ದುಪಡಿ, ಹಾಗೂ ವಿಳಾಸ ಬದಲಾವಣೆ ಸೇರಿದಂತೆ ಅಗತ್ಯ ಅರ್ಜಿಗಳನ್ನು ನಮೂನೆ–6, ನಮೂನೆ–6ಎ, ನಮೂನೆ–7 ಹಾಗೂ ನಮೂನೆ–8ರಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಕರಡು ಮತದಾರರ ಪಟ್ಟಿಯಲ್ಲಿನ ಮತದಾರರ ಹೆಸರು ಗುರುತಿಸಲು ಬಿಎ ಅವರು ಸಹಕಾರ ನೀಡುವರು. ಅರ್ಹರು ಈ ವಿಶೇಷ ಆಂದೋಲನದ ಸದುಪಯೋಗ ಪಡೆದುಕೊಂಡು ತಮ್ಮ ವ್ಯಾಪ್ತಿಯ ಮತಗಟ್ಟೆಗೆ ಭೇಟಿ ನೀಡಿ, ಮತದಾರರ ಪಟ್ಟಿಗೆ ಸಂಬಂಧಿಸಿದ ಅಗತ್ಯ ಅರ್ಜಿಗಳನ್ನು ಸಲ್ಲಿಸುವಂತೆ ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




# ಕೋಟಿವೃಕ್ಷ ಅಭಿಯಾನದಿಂದ ಅರಣ್ಯ ಪ್ರದೇಶ ಹೆಚ್ಚಳ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೃಷಿ, ತೋಟಗಾರಿಕೆ ಹಾಗೂ ಪರಿಸರ ಸಂರಕ್ಷಣೆ ಕ್ಷೇತ್ರಗಳಲ್ಲಿ ಜಿಲ್ಲೆ ಗಮನಾರ್ಹ ಸಾಧನೆ ಮಾಡುತ್ತಿದ್ದು, ಸುಸ್ಥಿರ ಅಭಿವೃದ್ಧಿ ಗು–ರಿಗಳ ಸಾಧನೆಡೆಗೆ ಸಾಗುತ್ತಿದೆ ಎಂದು ಪ್ರಾಚಾರ್ಯ ಜೆ.ಎಸ್.ಹಿರೇಮಠ ಹೇಳಿದರು. ನಗರದ ಅಫಜಲಪುರ ಟಕ್ಕೆಯಲ್ಲಿರುವ ಜಿಲ್ಲಾ ತರಬೇತಿ ಸಂಸ್ಥೆಯಲ್ಲಿ ಆಯೋಜಿಸಿದ್ದ ಎರಡು ದಿನಗಳ ಸುಸ್ಥಿರ ಅಭಿವೃದ್ಧಿ ಗುರಿಗಳ ಕುರಿತ ಪರಿಚಯಾತ್ಮಕ ತರಬೇತಿ ಕಾರ್ಯಾಗಾರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಜಿಲ್ಲಾ ಉಸ್ತುವಾರಿ ಸಚಿವರ ಮಾರ್ಗದರ್ಶನದಲ್ಲಿ ಜಿಲ್ಲೆಯಲ್ಲಿ ಕೈಗೊಂಡಿರುವ ಕೋಟಿವೃಕ್ಷ ಅಭಿಯಾನದಿಂದ ಅರಣ್ಯ ಪ್ರದೇಶದ ಪ್ರಮಾಣ ಶೇ.0.17ರಿಂದ ಶೇ.2.4ಕ್ಕೆ ಏರಿಕೆಯಾಗಿದೆ ಎಂದು ಅವರು ತಿಳಿಸಿದರು. ತರಬೇತಿ ಬೋಧಕರಾದ ವಿ.ವಿ. ಕಮಲಾಪೂರ ಹಾಗೂ ಎಸ್. ಆರ್. ಹೀರೇಮಠ ಮಾತನಾಡಿದರು.

ಮೈಸೂರಿನ ಆಡಳಿತ ತರಬೇತಿ ಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳ ಕರ್ನಾಟಕ ಕೇಂದ್ರದ ಸಂಯೋಜಕ ಡಾ. ಸಿದ್ದರಾಮ ಹೆಚ್.ಎಂ. ಅವರು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಾಗಾರದಲಿ ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾಧಿಕಾರಿ ವ್ಯಾಪ್ತಿಯ ವಿವಿಧ ಇಲಾಖೆ ಅಧಿಕಾರಿ, ಸಿಬ್ಬಂದಿ ತರಬೇತಿಯಲ್ಲಿ ಪಾಲ್ಗೊಂಡಿದ್ದರು.

# ಶ್ರೀ ಎ.ಬಿ.ಜತ್ತಿ ಪ್ರೌಢಶಾಲೆ ಸಿಬ್ಬಂದಿ ತಂಡಕ್ಕೆ ಕ್ರಿಕೆಟ್ ಟ್ರೋಫಿ

■ ಉದಯರಶ್ಮಿ ದಿನಪತ್ರಿಕೆ




**ಡಾ.ಎಂ.ಬಿ.ಪಾಟೀಲರ ಜನ್ಮದಿನದ ಪ್ರಯುಕ್ತ ಕ್ರಿಕೆಟ್ ಟೂರ್ನಮೆಂಟ್। ಶಿಕ್ಷಕ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳಿಂದ ಉತ್ಸಾಹದ ಭಾಗಿತ್ವ**

ತಿಕೋಟಾ: ಡಾ.ಎಂ.ಬಿ.ಪಾಟೀಲರ ಹುಟ್ಟು ಹಬ್ಬದ ನಿಮಿತ್ತ ಬಿ.ಎಲ್.ಡಿ.ಇ. ಸಂಸ್ಥೆಯ ತಿಕೋಟಾದ ಶ್ರೀ ಎ.ಬಿ.ಜತ್ತಿ ಕಾಲೇಜಿನ ಆವರಣದಲ್ಲಿ ಮೂರು ದಿನಗಳ ಕಾಲ ನಡೆದ ಕ್ರಿಕೆಟ್ ಟೂರ್ನಮೆಂಟ್ ಗೆ ಶುಕ್ರವಾರ ತೆರೆ ಬಿದ್ದಿತು.

ಬಿ.ಎಲ್.ಡಿ.ಇ ಸಂಸ್ಥೆಯ ನೂತನ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯವು ಅಂತರ್ ಶಾಲಾ ಕಾಲೇಜುಗಳ ಬೋಧಕ

ಸಿಬ್ಬಂದಿ ತಂಡಗಳು ಮತ್ತು ವಿದ್ಯಾರ್ಥಿ ತಂಡಗಳು ಅತ್ಯಂತ ಉತ್ಸಾಹದಿಂದ ಭಾಗವಹಿಸುವ ಮೂಲಕ ಕ್ರಿಕೆಟ್ ಟೂರ್ನಮೆಂಟ್ ಯಶಸ್ವಿಗೊಳಿಸಲಾಯಿತು.

ಶುಕ್ರವಾರ ದಿನ ನಡೆದ ಅಂತಿಮ ಫೈನಲ್ ಪಂದ್ಯದಲ್ಲಿ ಶ್ರೀ ಎ.ಬಿ.ಜತ್ತಿ ಪ್ರೌಢ ಶಾಲೆಯ ಉಪಪ್ರಾಚಾರ್ಯ ಜೆ. ಎಂ.ಪಾಟೀಲ ನಾಯಕತ್ವದ ಸಿಬ್ಬಂದಿ ತಂಡವು ನೂತನ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಸಿಬ್ಬಂದಿ ತಂಡವನ್ನು ಪರಾಭವಗೊಳಿಸಿ, ಪ್ರಥಮ ಸ್ಥಾನದ ಟ್ರೋಫಿ ಪಡೆದುಕೊಂಡಿತು. ಇನ್ನು ವಿದ್ಯಾರ್ಥಿಗಳ ವಿಭಾಗದಿಂದ ನಡೆದ

ಫೈನಲ್ ಪಂದ್ಯದಲ್ಲಿ ಶ್ರೀ ಎ.ಬಿ.ಜತ್ತಿ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳ ತಂಡವನ್ನು ನರ್ಸಿಂಗ್ ಮಹಾವಿದ್ಯಾಲಯದ ತಂಡ ಪರಾಭವಗೊಳಿಸಿ ಪ್ರಥಮ ಸ್ಥಾನ ಪಡೆದುಕೊಂಡಿತು. ರನ್ನರ್ ಆಫ್ ಆದ ನೂತನ ಕಲಾ ಮಹಾವಿದ್ಯಾಲಯ ಸಿಬ್ಬಂದಿ ತಂಡ, ಶ್ರೀ ಎ.ಬಿ.ಜತ್ತಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿ ತಂಡಕ್ಕೆ ದ್ವಿತೀಯ ಸ್ಥಾನದ ಬಹುಮಾನಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಪ್ರಾಂಶುಪಾಲ ಪ್ರೊ.ಪಿ. ಎಸ್.ತೋಳನೂರ, ನರ್ಸಿಂಗ್ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಪ್ರಕಾಶ ಸಿದ್ದಾಪುರ,

ಶ್ರೀ ಎ.ಬಿ.ಜತ್ತಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಕೆ.ಎ.ಹೊಸಟ್ಟಿ, ಶ್ರೀ ಎ.ಬಿ.ಜತ್ತಿ ಪದವಿಪೂರ್ವ ಕಾಲೇಜು (ಮಾಧ್ಯಮಿಕ ವಿಭಾಗ) ಉಪ ಪ್ರಾಂಶುಪಾಲ ಜಗದೀಶಗೌಡ ಪಾಟೀಲ, ಐಕ್ಯೂಎಸಿ ಸಂಂ–ಯೋಜಕ ಪ್ರೊ.ಬಿ.ಎಸ್.ಬೆಳಗಲಿ, ದೈಹಿಕ ಶಿಕ್ಷಣ ನಿರ್ದೇಶಕ ಬಿ.ಆರ್.ದೇಸಾಯಿ,ಕಚೇರಿ ಅಧೀಕ್ಷಕ ಎಸ್.ಪಿ.ಪಾಟೀಲ, ದೈಹಿಕ ಶಿಕ್ಷಣ ನಿರ್ದೇಶಕ ದಯಪ್ಪಗೌಡ ಪಾಟೀಲ , ಬಿ.ಎಲ್. ನಾಟೀಕಾರ, ದೈಹಿಕ ಶಿಕ್ಷಕ ಕಲ್ಯಾಣಿ, ನಿವೃತ್ತ ಶಿಕ್ಷಕ ಡಿ.ಬಿ.ಪಾಟೀಲ, ಬಿ.ಎಲ್.ಡಿ.ಇ ಸಂಸ್ಥೆಯ ತಿಕೋಟಾ ಶಾಲಾ ಕಾಲೇಜುಗಳ ಸಿಬ್ಬಂದಿ, ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಯೋಗದಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಯೋಗದಿಂದ ಉತ್ತಮ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯ ಎಂದು ಬಿ.ಎಲ್.ಡಿ.ಇ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ಹೇಳಿದ್ದಾರೆ.

ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಯೋಗ ಶಿಕ್ಷಕ ಮಡಿವಾಳಪ್ಪ ಪರಸಪ್ಪ ದೊಡಮನಿ ಅವರಿಗೆ ಎಷಿಯನ್ ಫೆಸಿಫಿಕ್ ಐಕಾನ್ ಅವಾರ್ಡ್ ಪ್ರಶಸ್ತಿ ಲಭಿಸಿದ ಹಿನ್ನೆಲೆಯಲ್ಲಿ ಗುರುವಾರ ಅವರನ್ನು ಅಭಿನಂದಿಸಿ ಶಾಸಕರು ಮಾತನಾಡಿದರು.

ವಿದ್ಯಾರ್ಥಿ ದೆಸೆಯಿಂದಲೇ ಯೋಗದಲ್ಲಿ ತೊಡಗಿಸಿಕೊಳ್ಳುವುದ–ರಿಂದ ಒತ್ತಡ ನಿಯಂತ್ರಣ ಕರಗತ ಮಾಡಿಕೊಳ್ಳಬಹುದು. ಇದರಿಂದ ಏಕಾಗ್ರತೆ ಹೆಚ್ಚಾಗಲಿದ್ದು, ದೈಹಿಕವಾಗಿಯೂ ಉತ್ತಮ ಆರೋಗ್ಯ ಹೊಂದಲು ಸಾಧ್ಯ. ದೊಡಮನಿ ಅವರು ಯೋಗದಲ್ಲಿ ಅವರದೇ ಆದ ಛಾಪು ಮೂಡಿಸಿದ್ದಾರೆ.

ದೇಶದಲ್ಲಷ್ಟೇ ಅಲ್ಲ, ವಿದೇಶಗಳಲ್ಲಿಯೂ ಭಾರತದ ಕೀರ್ತಿ ಪತಾಕೆಯನ್ನು ಎತ್ತಿ ಹಿಡಿಯುವ ಮೂಲಕ ಬಸವನಾಡಿಗೆ ಹೆಮ್ಮೆ ತಂದಿದ್ದಾರೆ. ಅವರ ಯೋಗ ಚಟುವಟಿ–ಕೆಗಳಿಗೆ ಪ್ರೋತ್ಸಾಹ ನೀಡಲಾಗುವುದು. ಅವರ ಭವಿಷ್ಯದ ಯೋಜನೆಗಳು ಯಶಸ್ವಿಯಾಗಲಿ ಎಂದು ಸುನೀಲಗೌಡ ಪಾಟೀಲ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಡಿವಾಳಪ್ಪ ಪರಸಪ್ಪ ದೊಡಮನಿ, ಕಳೆದ 16 ವರ್ಷಗಳಿಂದ ಯೋಗಾಭ್ಯಾಸ ನಿರತನಾಗಿದ್ದೇನೆ. ಆರು ವರ್ಷಗಳಿಂದ ಬಿ.ಎಲ್.ಡಿ.ಇ ಡೀಮ್ಡ್ ವಿವಿಯಲ್ಲಿ ಯೋಗ ಶಿಕ್ಷಕನಾಗಿ ತರಬೇತಿ ನೀಡುತ್ತಿದ್ದೇನೆ. ಬಿ.ಎ ಪದವಿ, ಪಿಜಿ ಡಿಪ್ಲೋಮಾ ಇನ್ ಯೋಗ, ಸರ್ಟಿಫಿಕೇಟ್ ಯೋಗಾ ಸ್ಟಡೀಸ್(ಸಿವೈಎಸ್), ಯೋಗ ಇನಸ್ಟ್ರಕ್ಟರ್ ಕೋರ್ಸ್(ವೈಐಸಿ) ಅಧ್ಯಯನ ಮಾಡಿದ್ದೇನೆ. ನೇಪಾಳದಲ್ಲಿ ಯೋಗದಲ್ಲಿ ಗೌರವ ಪದವಿ ಪಡೆದಿದ್ದೇನೆ. ವಿಯಟ್ನಾಂ ನಲ್ಲಿ ತರಬೇತುದಾರನಾಗಿ ಸೇವೆ ಸಲ್ಲಿಸಿದ್ದೇನೆ. 2023ರಲ್ಲಿ ಥೈಲ್ಯಾಂಡ್ ನಲ್ಲಿ ಮತ್ತು 2024ರಲ್ಲಿ ದುಬೈನಲ್ಲಿ ನಡೆದ ಅಂತಾರಾಷ್ಟ್ರೀಯ ಯೋಗ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದೇನೆ. 2025ರಲ್ಲಿ ಮಲೇಶಿಯಾದಲ್ಲಿ ನಡೆದ ಸ್ಪರ್ಧೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದೇನೆ. 2018ರಲ್ಲಿ ರಾಮದೇವ ಬಾಬಾ ನಗದು ಪುರಸ್ಕಾರ ದೊರೆತಿದೆ. ಸೆಪ್ಟೆಂಬರ್ 7 ರಂದು ಥೈಲ್ಯಾಂಡ್ ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಎಷಿಯನ್ ಫೆಸಿಫಿಕ್ ಐಕಾನ್ ಅವಾರ್ಡ್ ಬಂದಿದೆ. ಈವರೆಗೆ ಸುಮಾರು 20 ಪ್ರಶಸ್ತಿಗಳು ಬಂದಿದ್ದು, ದೇಶದ ನಾನಾ ರಾಜ್ಯಗಳಲ್ಲಿ ತರಬೇತುದಾರ ಮತ್ತು ನಿರ್ಣಾಯಕರಾಗಿ ಸೇವೆ ಸಲ್ಲಿಸಿದ್ದೇನೆ. ನನ್ನ ಸಾಧನೆಗೆ ಬಿ.ಎಲ್.ಡಿ.ಇ ಡೀಮ್ಡ್ ವಿವಿ ಬೆನ್ನೆಲುಬಾಗಿ ನಿಂತಿದೆ ಎಂದು ಸಂತಸ ಹಂಚಿಕೊಂಡರು.

ಈ ಸಂದರ್ಭದಲ್ಲಿ ಬಿ.ಎಲ್.ಡಿ.ಇ ಡೀಮ್ಡ್ ವಿವಿ ರಜಿಸ್ಟ್ರಾರ್ ಡಾ. ಆರ್. ವಿ. ಕುಲಕರ್ಣಿ, ಬಿ.ಎಲ್.ಡಿ.ಇ ಸಂಸ್ಥೆಯ ಆಡಳಿತಾಧಿಕಾರಿ ಎಂ. ಎನ್. ಚೋರಗಸ್ತಿ, ಹಣಕಾಸು ಉಪಅಧಿಕಾರಿ ಯಲ್ಲಾಲಿಂಗ ಜನವಾಡ, ಶ್ರೀ ಬಿ. ಎಂ. ಪಾಟೀಲ ಐಸಿಎ ಶಾಲೆಯ ಪ್ರಾಚಾರ್ಯ ವಿಕ್ರಂ ನಾರ್ವೇಕರ, ಸಿಬಿಎಸ್ ಶಾಲೆಯ ಪ್ರಭಾರ ಪ್ರಾಚಾರ್ಯೆ ವಸುದಾ ನಾರ್ವೆಕರ, ಕೋ–ಆರ್ಡಿನೇಟ–ರ್ ಗಳಾದ ದೀಪಾ ಜಂಬೂರೆ, ಜಯಾ ಗಲಗಲಿ ಉಪಸ್ಥಿತರಿದ್ದರು.

# 30 ವರ್ಷಗಳಿಂದ ಭೂಮಿ ಕಳೆದುಕೊಂಡ ರೈತರಿಗೆ ಹಕ್ಕುಪತ್ರ ನೀಡದಿರುವುದನ್ನು ಖಂಡಿಸಿ ಕೊಲ್ಹಾರದಲ್ಲಿ ಬೃಹತ್ ಹೋರಾಟ

## 3 ದಶಕ ಕಳೆದರೂ ಆಲಮಟ್ಟಿ ಸಂತ್ರಸ್ತರ ಸಮಸ್ಯೆಗಿಲ್ಲ ಪರಿಹಾರ!

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ಕೃಷ್ಣಾ ಮೇಲ್ದಂಡೆ ಯೋಜನೆಗಾಗಿ ಮನೆ, ಮಠ ಹಾಗೂ ಭೂಮಿ ಕಳೆದುಕೊಂಡ ಮುಳುಗಡೆ ಸಂತ್ರಸ್ತರಿಗೆ ಮೂರು ದಶಕಗಳು ಕಳೆದರೂ ಹಕ್ಕುಪತ್ರ, ಉತಾರಿ ನೀಡದಿರುವುದು ಖಂಡಿಸಿ ಹಾಗೂ ರೈತರ ವಿವಿಧ ಬೇಡಿಕೆಗಳನ್ನು ಈಡೇರಿಸಲು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಬುಧವಾರ ಪಟ್ಟಣದಲ್ಲಿ ಬೃಹತ್ ಹೋರಾಟ ನಡೆಯಿತು.

ರೈತ ಸಂಘದ ರಾಜ್ಯ ಗೌರವಾಧ್ಯಕ್ಷ ಶಶಿಕಾಂತ ಗುರೂಜಿ ಹಾಗೂ ರಾಜ್ಯಾಧ್ಯಕ್ಷ ಚೂನಪ್ಪ ಪೂಜಾರಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ತಾಲೂಕಿನ ವಿವಿಧ ಗ್ರಾಮಗಳಿಂದ ಸಾವಿರಾರು ರೈತರು ಪಾಲ್ಗೊಂಡರು.

ಪಟ್ಟಣದ ಬಸವೇಶ್ವರ ವೃತ್ತದಿಂದ ತಹಶೀಲ್ದಾರ್ ಕಚೇರಿವರೆಗೆ ರೈತರು ಮೆರವಣಿಗೆ ನಡೆಸಿ, ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ರಾಜ್ಯ ಗೌರವಾಧ್ಯಕ್ಷ ಶಶಿಕಾಂತ ಗುರೂಜಿ, 1996ರಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಗಾಗಿ ಭೂಮಿ ಕಳೆದುಕೊಂಡ ಸಂತ್ರಸ್ತರಿಗೆ ಇಂದಿಗೂ ಹಕ್ಕುಪತ್ರ, ಉತಾರಿ ನೀಡಿಲ್ಲ. ಕೂಡಲೇ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸುವುದು ಸೇರಿದಂತೆ ರೈತರ ಎಲ್ಲ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು.

ಆಲಮಟ್ಟಿ ಜಲಾಶಯ ನಿರ್ಮಾಣ–ಕ್ಕಾಗಿ ಈ ಭಾಗದ ಹಿರಿಯರು ತಮ್ಮ ಬೆಲೆಬಾಳುವ ಭೂಮಿಯನ್ನು ಅತಿ ಕಡಿಮೆ ಪರಿಹಾರಕ್ಕೆ ಬಿಟ್ಟುಕೊಟ್ಟಿದ್ದರು. ಮುಂದಿನ ಪೀಳಿಗೆಗೆ ಸಮೃದ್ಧ ನೀರು ದೊರೆಯಲಿದೆ, ಈ ಭಾಗ ಸಂಪೂರ್ಣ ನೀರಾವರಿಯಾಗಿ ರೈತರ ಬದುಕು ಹಸನಾಗಲಿದೆ ಎಂಬ ಮಹತ್ವದ ಕನಸಿನಿಂದ ಭೂಮಿ ನೀಡಿದ್ದಾರೆ. ಆದರೆ ಯೋಜನೆ ಆರಂಭವಾಗಿ ದಶಕಗಳು ಕಳೆದರೂ ಇನ್ನೂ ಸಂಪೂರ್ಣವಾಗಿ ಪೂರ್ಣಗೊಳ್ಳದಿರುವುದು ದುರದೃಷ್ಟಕರ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪಟ್ಟಣದ ಸ್ಟೇಟ್ ಬ್ಯಾಂಕ್ ಹಿಂದುಗಡೆ ಕಳೆದ 25 ವರ್ಷಗಳಿಂದ ತಾತ್ಕಾಲಿಕವಾಗಿ ವಾಸವಾಗಿರುವ ಸಂತ್ರಸ್ತರಿಗೆ ಯಾವುದೇ ನಿವೇಶನಗಳಿಲ್ಲ. ರಾಜ್ಯ ರೈತ ಸಂಘದಿಂದ ಜಿಲ್ಲಾಧಿಕಾರಿಗಳಿಗೆ ಕೂಡಲೇ ಮನವಿ ಸಲ್ಲಿಸಲಾಗುವುದು. ಸರ್ಕಾರದ ಮಟ್ಟದಲ್ಲಿ ಚರ್ಚೆಯಾಗಿ ನಿವೇಶನಗಳು ಮಂಜೂರು ಆಗುವವರೆಗೂ ನಿರಾಶ್ರಿತರನ್ನ ಯಾವುದೇ ತೊಂದರೆ ಮಾಡಬಾರದು ಅಲ್ಲಿಯವ–ರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಎಂದು ಪಟ್ಟಣ ಪಂಚಾಯತಿ ಮುಖ್ಯ ಅಧಿಕಾರಿ ವೀರೇಶ ಹಟ್ಟಿಯವರಿಗೆ ತಿಳಿಸಿದರು.

ರಾಜ್ಯಾಧ್ಯಕ್ಷ ಚೂನಪ್ಪ ಪೂಜಾರಿ ಮಾತನಾಡಿ, ರೈತರ ಬದುಕು ಮೊದಲೇ ಸಂಕಷ್ಟದಿಂದ ಕೂಡಿದೆ. ಅವರ ಗಾಯದ ಮೇಲೆ ಬರೆ ಎಳೆಯುವ ಕೆಲಸವನ್ನು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಮಾಡಬಾರದು. ರೈತರ ನ್ಯಾಯಯುತ ಬೇಡಿಕೆಗಳನ್ನು ತಕ್ಷಣ ಈಡೇರಿಸಿ, ಮುಳುಗಡೆ ಸಂತ್ರಸ್ತರ ದಶಕಗಳ ನೋವಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ಉಪಾಧ್ಯಕ್ಷ ಕಲ್ಲು ಸೊನ್ನದ, ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಹಾಗೂ ತಾಲೂಕು ಅಧ್ಯಕ್ಷ ಸೋಮು ಬಿರಾದಾರ ಮಾತನಾಡಿದರು.

### ಪ್ರಮುಖ ಬೇಡಿಕೆಗಳು

**1996ರಲ್ಲಿ ಆಲಮಟ್ಟಿ ಜಲಾಶಯಕ್ಕಾಗಿ ಮನೆ, ಮಠ ಹಾಗೂ ಭೂಮಿ ಕಳೆದುಕೊಂಡ ಮುಳುಗಡೆ ಸಂತ್ರಸ್ತರಿಗೆ ಕೂಡಲೇ ಹಕ್ಕುಪತ್ರ ವಿತರಿಸಬೇಕು. ವಿಜಯಪುರ ಜಿಲ್ಲೆಯ ಎಲ್ಲ ಕೆರೆಗಳನ್ನು ಮುಳವಾಡ ಏತ ನೀರಾವರಿ ಯೋಜನೆಯ ಮೂಲಕ ತುಂಬಿಸಬೇಕು. ಜನವರಿಯಿಂದ ಜುಲೈವರೆಗೆ ಜನ–ಜಾನುವಾರುಗಳ ಕುಡಿಯುವ ನೀರಿಗಾಗಿ 20 ಟಿಎಂಸಿ ನೀರನ್ನು ಕಾಯ್ದಿರಿಸಬೇಕು. ರೈತರ ಜಮೀನುಗಳಿಗೆ ಬೆಳಿಗ್ಗೆ 7 ಗಂಟೆ ಮೂರು ಫೇಸ್ ಹಾಗೂ ರಾತ್ರಿ ಸಿಂಗಲ್ ಫೇಸ್ ವಿದ್ಯುತ್ ಸಮರ್ಪಕವಾಗಿ ಪೂರೈಸಬೇಕು. ಯಾವುದೇ ಕಾರಣಕ್ಕೂ ವಿದ್ಯುತ್ ಸಮಸ್ಯೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು.**

ಯುಕೆಪಿ ವಿಶೇಷ ಜಿಲ್ಲಾಧಿಕಾರಿ, ವಿಜಯಪುರ ಅಪರ ಜಿಲ್ಲಾಧಿಕಾರಿ, ಹೆಸ್ಕಾಂ ಅಧಿಕಾರಿಗಳು, ಸ್ಥಳೀಯ ತಾಲೂಕು ದಂಡಾಧಿಕಾರಿ ಹಾಗೂ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು ಪ್ರತಿಭಟನಾಕಾರರೊಂದಿಗೆ ಮಾತುಕತೆ ನಡೆಸಿದರು.

ಬಾಕಿ ಉಳಿದಿರುವ ಮುಳುಗಡೆ ಸಂತ್ರಸ್ತರ ಬೇಡಿಕೆಗಳನ್ನು ನಾಲ್ಕು ತಿಂಗಳ ಕಾಲಾವಧಿಯಲ್ಲಿ ಬಗೆಹರಿಸುವುದಾಗಿ ಅಧಿಕಾರಿಗಳು ಲಿಖಿತವಾಗಿ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ಅಂತ್ಯಗೊಳಿಸಲಾಯಿತು.

ಈ ಸಂದರ್ಭದಲ್ಲಿ ಅಪ್ಪುಗೌಡ ಪಾಟೀಲ ಮನಗೂಳಿ, ರಾಜ್ಯ ಪ್ರಧಾನ ಕಾರ್ಯದರ್ಶಿ ರಾಹುಲ್ ಕುಬಕಡ್ಡಿ, ಮಲ್ಲಪ್ಪ ಅಂಗಡಿ, ಪ್ರೇಮ್ ಚೌಗಲಾ, ಪ್ರಕಾಶ ಉಮ್ರಾಣಿ, ಶಿವಾನಂದ, ಸಿದ್ದು ಬಾಲಗೊಂಡ, ವಿಜಯಮಹಾಂತೇಶ ಗಿಡ್ಡಪ್ಪಗೋಳ, ಸಿ.ಎಸ್. ಗಿಡ್ಡಪ್ಪಗೋಳ, ಈರಣ್ಣಗೌಡ ಕೋಮಾರ, ಸಿ.ಎಂ. ಗಣ–ಕುಮಾರ, ಪೀರಮಮ್ಮದ್ ಗಿರಗಾವಿ, ಇಸ್ಮಾಯಿಲ್ ತಸೀಲ್ದಾರ್, ಈರಪ್ಪ ಕೋಲಕಾರ, ಸಂಗೂ ಹಲ್ಯಾಳ, ಚನ್ನಪ್ಪ ಅಂತರಗೊಂಡ, ರಾಮನಗೌಡ ಪಾಟೀಲ, ಮಹಾದೇವ ಬನಸೋಡೆ, ಸಂಗಪ್ಪ ಟಕ್ಕೆ, ಅಂಬರೇಶ ಭೈರಗೊಂಡ, ವಸಂತ ಭೈರಮಾಡಿ, ಸಾತಲಿಂಗಯ್ಯ ಸಾಲಿಮಠ, ಮಾಳು ಪೂಜಾರಿ, ಲಕ್ಷ್ಮೀ ಬಿರಾದಾರ ಸೇ–ರಿದಂತೆ ರೈತ ಮುಖಂಡರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸಾವಿರಾರು ರೈತರು ಇದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR